# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಬದುಕಿನಲ್ಲಿ ಏನೇ ನಡೆದರೂ ಒಳ್ಳೆಯದೇ..
ವರ್ತಮಾನದಲ್ಲಿ ಏನಾಗುತ್ತಿದೆಯೋ ಅದೆಲ್ಲವೂ
ಉತ್ತಮವಾಗಿಯೇ ನಡೆಯುತ್ತಿದೆ..
ಮುಂದೆ ಏನಾಗಲಿದೆಯೋ ಅದು ಕೂಡ
ಚೆನ್ನಾಗಿಯೇ ನಡೆಯಲಿದೆ..
ಭವಿಷ್ಯದ ಬಗ್ಗೆ ಎಂದಿಗೂ ಚಿಂತಿಸಬೇಡಿ
ವರ್ತಮಾನದಲ್ಲಿಯೇ ಜೀವಿಸಿ..
**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 26-12-2025 to 01-01-2026 ಬೆಲೆ:10-00 ಸಂಪುಟ–1 ಸಂಚಿಕೆ–13 ಪುಟಗಳು–6


**2026**

ಹೊಸ

ಕ್ಯಾಲೆಂಡರ್

ವರ್ಷದ

ಶುಭಾಶಯಗಳು



ದಕ್ಷಿಣ ಕನ್ನಡ ಜಿಲ್ಲೆಯ ಜನರ ಬಹು ಪ್ರಿಯವಾದ ಪಿಲಿಕುಳ ಜೈವಿಕ ಉದ್ಯಾನವನದಲ್ಲಿ ಈಗಾಗಲೇ ಸಿಂಹ, ಹುಲಿ, ಚಿರತೆ, ತೋಳದಂತಹ ಪ್ರಾಣಿಗಳ ಜೊತೆ ಹಲವು ಜಾತಿಯ ಹಾವುಗಳು, ಪಕ್ಷಿಗಳು ಕಾಣಸಿಗುತ್ತವೆ. ಇನ್ನು ಮುಂದೆ ಹುಲಿ ರಾಣಿಯ ಜೊತೆ ಅವಳ ಮರಿಗಳಾದ ಟೆನ್‌ಸನ್ ಹಾಗೂ ಒಲಿವರ್ ಪ್ರಮುಖ ಆಕರ್ಷಣೆಯಾಗಲಿದೆ. ಒಂದು ವರ್ಷ ಪ್ರಾಯದ ಹುಲಿ ಮರಿಗಳ ಜನ್ಮ ದಿನಾಚರಣೆಯನ್ನು ಇತ್ತೀಚೆಗೆ ಆಚರಿಸಲಾಯಿತು. ನಗರದ ಕಾರ್ಡೋಲೈಟ್ ಸ್ಪೆಷಾಲಿಟಿ ಕೆಮಿಕಲ್ಸ್ ಇಂಡಿಯಾ ಸಂಸ್ಥೆಯು ಒಂದು ವರ್ಷದ ಅವಧಿಗೆ ಎರಡು ಮರಿಗಳನ್ನು ದತ್ತು ಪಡೆದಿದೆ. ದೇಶದಲ್ಲಿ ಸುಮಾರು ಮೂರು ಸಾವಿರದ ಆರ್ನೂರಕ್ಕೂ ಹೆಚ್ಚಿನ ಹುಲಿಗಳಿದ್ದು, ಅದರಲ್ಲಿ ಕರ್ನಾಟಕದಲ್ಲಿ ಸುಮಾರು ಐನೂರ ಅರವತ್ತಕ್ಕೂ ಹೆಚ್ಚು ಹುಲಿಗಳು ಇದ್ದು, ಇದು ದೇಶದಲ್ಲಿ ಎರಡನೆಯ ಸ್ಥಾನವಾಗಿದೆ.

## ಕಾಂಗ್ರೆಸ್ಸಿಗರು ದೇವರಿಗಿಂತ ದೊಡ್ಡವರಾ –ಕಾಮತ್



**ಮಂಗಳೂರು:** ಪಾಲಿಕೆಯ ಫ್ಲೆಕ್ಸ್ ನಿಯಮಗಳು ಕೇವಲ ದೇವಸ್ಥಾನ, ದೈವಸ್ಥಾನ ಮೊದಲಾದ ಧಾರ್ಮಿಕ ಕಾರ್ಯಕ್ರಮಗಳಿಗೆ ಮಾತ್ರ ಅನ್ವಯವಾಗುತ್ತಿದ್ದು ಕಾಂಗ್ರೆಸ್ಸಿನ ಯಾವುದೇ ಕಾರ್ಯಕ್ರಮಗಳಿಗೆ ಅನ್ವಯವಾಗುತ್ತಿಲ್ಲ. ಕಾಂಗ್ರೆಸ್ಸಿಗರು ದೇವರಿಗಿಂತ ದೊಡ್ಡವರಾ ಎಂದು ಮಂಗಳೂರು ದಕ್ಷಿಣದ ಶಾಸಕ ವೇದವ್ಯಾಸ್ ಕಾಮತ್ ಪ್ರಶ್ನಿಸಿದ್ದಾರೆ. ಪಾಲಿಕೆಯವರು ಆಳುವ ಪಕ್ಷದ ಕೈಗೊಂಬೆಯಂತೆ ವರ್ತಿಸುವುದು ಬಿಟ್ಟು, ನಗರದ ಬೀದಿಗಳಲ್ಲಿ ಬಿದ್ದಿರುವ ಕಸದ ರಾಶಿ ಸಹಿತ ಕಟ್ಟಡ ಸಾಮಾಗ್ರಿಗಳ ಅವಶೇಷಗಳನ್ನು ತೆರವುಗೊಳಿಸಲಿ. ಅನೇಕ ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರಿದೆ. ಹೊಂಡಗಳಿಂದ ಕೂಡಿದ ರಸ್ತೆಗಳು ನಿರ್ಮಾಣವಾಗಿವೆ. **3ನೇ ಪುಟಕ್ಕೆ**

## ನವ ವರುಷಕ್ಕೆ ನವ ಸೊಬಗಿನೊಂದಿಗೆ ಮಂಗಳೂರು ಕಂಬಳ



**ಮಂಗಳೂರು:** ತುಳುನಾಡಿನ ಶ್ರೀಮಂತ ಸಂಸ್ಕೃತಿಯ ಭಾಗವಾಗಿರುವ ಕಂಬಳ ನೂರಾರು ವರ್ಷಗಳ ಘನ ಪರಂಪರೆಯನ್ನು ಹೊಂದಿದ್ದು, ಈ ಮಣ್ಣಿನ ಧಾರ್ಮಿಕ ಕಟ್ಟುಕಟ್ಟಳೆಗಳೊಂದಿಗೆ ಗ್ರಾಮೀಣ ಸೊಗಡನ್ನು ಸಾರುವ ಜನಜೀವನವನ್ನು ಪ್ರತಿಬಿಂಬಿಸುವ ಕೃಷಿಕ ಮತ್ತು ಜಾನುವಾರುಗಳ ಬದುಕಿನ ನಂಟಿನೊಂದಿಗೆ ಆರಂಭವಾದ ಸಾಂಪ್ರದಾಯಿಕ ಕ್ರೀಡೆಯು ಕಾಲಕ್ರಮೇಣ ಆಧುನಿಕತೆಗೆ ತೆರೆದುಕೊಳ್ಳುವ ಮೂಲಕ ವಿಶ್ವವ್ಯಾಪಿಯಾಗಿ ಇನ್ನಷ್ಟು ಜನಪ್ರಿಯವಾಗುತ್ತ ಬಂದಿದೆ. ಕಂಬಳವನ್ನು ನಿಷೇಧಿಸುವ ಮೂಲಕ ಇಲ್ಲಿನ ಮಣ್ಣಿನ ಮೂಲ ಸತ್ವಕ್ಕೆ ಕೊಡಲಿ ಏಟು ಕೊಟ್ಟು ನಮ್ಮ ಸಂಸ್ಕೃತಿಗೆ ಧಕ್ಕೆ ತರಲು ಯತ್ನಿಸಿದವರ ವಿರುದ್ಧದ ಪ್ರಬಲ ಹೋರಾಟದಲ್ಲಿ ಹುಟ್ಟಿಕೊಂಡ ಕಿಚ್ಚು 'ಮಂಗಳೂರು ಕಂಬಳ'ವು **3ನೇ ಪುಟಕ್ಕೆ...**

## ರಿಷಭ್ ಶೆಟ್ಟಿಯ ಹರಕೆ ನೇಮದ ವಿವಾದ ಅಂತ್ಯ..?



**ಮಂಗಳೂರು:** ಕಾಂತಾರ ನಟ, ನಿರ್ದೇಶಕ ರಿಷಭ್ ಶೆಟ್ಟಿ ವಾರಾಹಿ ಪಂಜುರ್ಲಿ ದೈವಕ್ಕೆ ನೀಡಿರುವ ಹರಕೆ ನೇಮದ ಬಳಿಕ ಆದ ಹಲವಾರು ವಿವಾದಗಳ ಬಳಿಕ ಪತ್ರಿಕಾ ಗೋಷ್ಠಿ ಕರೆದಿದ್ದ ಕದ್ರಿ ಬಾರೆಬೈಲು ಜಾರಂದಾಯ ದೈವಸ್ಥಾನದ ಆಡಳಿತ ಕಮಿಟಿಯ ಗೌರವಾಧ್ಯಕ್ಷ ರವಿ ಪ್ರಸನ್ನ, ತಮ್ಮಣ್ಣ ಶೆಟ್ಟಿಯವರು ಕೊಂಡಾಣ ಕ್ಷೇತ್ರದ ದೈವದ ಚಿನ್ನ ಅಡವಿಟ್ಟ ಬಗ್ಗೆ ಮತ್ತು ಹಲವಾರು ವಿಷಯಗಳ ಬಗ್ಗೆ ವೈಯಕ್ತಿಕ ಆರೋಪ ಮಾಡಿದ್ದರು. ಅಷ್ಟೇ ಅಲ್ಲದೆ ಪತ್ರಿಕಾಗೋಷ್ಠಿಯಲ್ಲಿ ಪ್ರಶ್ನಿಸಿದ ಪತ್ರಕರ್ತೆಯೊಬ್ಬರಿಗೆ ನಮ್ಮ ಬಳಿ **3ನೇ ಪುಟಕ್ಕೆ**

ಕ್ಷಣ ಕ್ಷಣದ ಸುದ್ದಿಗಳಿಗಾಗಿ

**ಕರಾವಳಿ ತರಂಗಿಣಿ**


ಪತ್ರಿಕಾ ಬಳಗದಿಂದ

**ಅಂತರ್ಜಾಲ ಮಾಧ್ಯಮ**

www.karavalitharangini.com

**ಕರಾವಳಿ ತರಂಗಿಣಿ**

ಮಂಗಳೂರು




## ಕಾಂಗ್ರೆಸ್ಸಿಗರು ದೇವರಿಗಿಂತ ದೊಡ್ಡವರಾ – ಕಾಮತ್

ಒಂದನೇ ಪುಟದಿಂದ......

ಜನರ ವಿರೋಧದ ಮಧ್ಯೆಯೂ ಕದ್ರಿ ಪಾರ್ಕ್‌ನಲ್ಲಿ ಪಾರ್ಕಿಂಗ್ ಶುಲ್ಕ ಆರಂಭಿಸಲಾಗಿದೆ. ಮೊದಲುಇದನ್ನು ಸರಿಪಡಿಸುವ ಬಗ್ಗೆ ಗಮನ ಹರಿಸಲಿ ಎಂದರು. ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕದ್ರಿಪಾರ್ಕ್, ಲೇಡಿಹಿಲ್, ಸೇರಿದಂತೆ ಬಹುತೇಕ ಭಾಗದಲ್ಲಿ ಪಾಲಿಕೆಯ ಅಧಿಕಾರಿಗಳು ಗೂಡಂಗಡಿಗಳನ್ನು ತೆರವುಗೊಳಿಸಿದ್ದಾರೆ. ಕಾಂಗ್ರೆಸ್ ನಾಯಕರು ಸೂಚಿಸಿರುವ ಕಡೆಗಳಲ್ಲಿ ಮಾತ್ರ ನಿರ್ಧಾಕ್ಷಿಣ್ಯ ಕ್ರಮ ಕೈಗೊಂಡು ಕೆಲವರಿಗೆ ಮಾತ್ರ ಅನ್ಯಾಯ ಮಾಡುತ್ತಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿದ್ದಾರೆ. ತೆರವುಗೊಳಿಸಲೇಬೇಕಾದ ಅನಿವಾರ್ಯತೆಯಿದ್ದರೆ ಎಲ್ಲವನ್ನೂ ತೆರವುಗೊಳಿಸಬೇಕು. ಅದು ಬಿಟ್ಟುದುಡಿದುತಿನ್ನುವ ಬಡ ವ್ಯಾಪಾರಿಗಳ ಮಧ್ಯೆಯೂ ಯಾಕೆ ಇಂತಹ ತಾರತಮ್ಯ? ಪಾಲಿಕೆಯಲ್ಲಿ ಬಿಜೆಪಿ ಆಡಳಿತವಿದ್ದಾಗ ಇಂತಹ ಅನ್ಯಾಯಗಳಿಗೆ ಆಸ್ಪದವಿರಲಿಲ್ಲ. ಇದೀಗ ರಾಜ್ಯ ಕಾಂಗ್ರೆಸ್ ಸರ್ಕಾರದ ಮೂಲಕ ಆಡಳಿತ ನಡೆಯುತ್ತಿರುವ ಈ ಸಂದರ್ಭದಲ್ಲಿಇಂತಹ ಪರಿಸ್ಥಿತಿಯನ್ನು ನೋಡುವಂತಾಗಿದೆ. ಜೈಲ್‌ಜಾಮರ್, ಇ- ಖಾತಾ ಸಮಸ್ಯೆಗಳು ಮಿತಿ ಮೀರಿದ್ದು ಸಚಿವರು, ಜಿಲ್ಲಾಡಳಿತ, ಸರ್ಕಾರ ಸೇರಿದಂತೆ ಎಲ್ಲಾ ಪ್ರಯತ್ನದ ಹೊರತಾಗಿಯೂ ದಪ್ಪ ಚರ್ಮದ ರಾಜ್ಯ ಸರ್ಕಾರ ಜನರ ಬವಣೆಗೆ ಅಂತ್ಯ ಹಾಡದಿರುವುದು ದುರಂತ ಎಂದರು.

## ನವ ವರುಷಕ್ಕೆ ನವ ಸೊಬಗಿನೊಂದಿಗೆ ಮಂಗಳೂರು ಕಂಬಳ

ಒಂದನೇ ಪುಟದಿಂದ......

ನವೋತ್ಸಾಹದ 9ನೇ ವರ್ಷಕ್ಕೆ ಹೆಜ್ಜೆಯನ್ನಿಟ್ಟಿರುವ ಹಿನ್ನಲೆಯಲ್ಲಿ ನವ ವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಂಗಳೂರು ಕಂಬಳದ ರುವಾರಿ, ಸಂಸದಕ್ಯಾ. ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಅವರು ನಗರದ ಖಾಸಗಿ ಹೊಟೇಲಿನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿ, ರಾಣಿಅಬ್ಬಕ್ಕ ಚಾರಿತ್ರಿಕ ಚಿತ್ರಕಲಾ ಪ್ರದರ್ಶನ, ವಂದೇ ಮಾತರಂ 150 – ಸಾಮೂಹಿಕ ಗೀತಗಾಯನ, ಮಂಗಳೂರು ಕಂಬಳ ಪ್ರಶಸ್ತಿ 2025, ಏಕ್ ಪೇಡ್ ಮಾಕೆ ನಾಮ್, ವಿಶೇಷ ಸಾಮರ್ಥ್ಯ ಹಾಗೂ ಓಲ್ಡ್ ಏಜ್ಡ್ ಹೋಮ್‌ನಲ್ಲಿ ನೆಲೆಸಿರುವ ಮಂಗಳೂರು ನಗರ ಪರಿಸರದ ನಿವಾಸಿಗಳನ್ನು ಕರೆತಂದು ಕಂಬಳ ವೀಕ್ಷಣೆಗೆ ಅವಕಾಶ, ಮಂಗಳೂರು ಕಂಬಳ 2025 ರೀಲ್ಸ್, ರಂಗ್‌ದಕೂಟ, ಮಂಗಳೂರು ಕಂಬಳ ಫೋಟೋಗ್ರಾಫಿ, ಎಐ ಕ್ರಿಯೇಟಿವ್ ಎಡಿಷನ್ ಎನ್ನುವ ಒಂಬತ್ತು ಕಾರ್ಯಕ್ರಮಗಳ ಜೊತೆ ಪರಿಸರ ಸ್ನೇಹಿ ಕಂಬಳಕ್ಕೆ ಪ್ರಯತ್ನ ಮಾಡಲಾಗುವುದು ಎಂದರು.

## ರಿಷಭ್ ಶೆಟ್ಟಿಯ ಹರಕೆ ನೇಮದ ವಿವಾದ ಅಂತ್ಯ..?

ಒಂದನೇ ಪುಟದಿಂದ......

ತುಂಬಾ ಜನರಿದ್ದಾರೆ ಎನ್ನುವ ದಮ್ಕಿ ಕೂಡ ಹಾಕಿದ್ದಲ್ಲದೆ, ಪ್ರಶ್ನಿಸುವವರನ್ನು ದೈವ ನೋಡಿಕೊಳ್ಳುತ್ತದೆ ಎನ್ನುವ ಮಾತನ್ನು ಹೇಳಿ ದೈವದ ಹೆಸರಲ್ಲಿ ಪತ್ರಕರ್ತರನ್ನು ಸುಮ್ಮನಾಗಿಸುವ ಪ್ರಯತ್ನಕೂಡ ಮಾಡಿದ್ದರು. ಈಗ ಕೊಂಡಾಣದ ಹೆಸರು ತೆಗೆದಿರುವ ಹಿನ್ನಲೆ ಕದ್ರಿ ಬಾರೆಬೈಲು ಜಾರಂದಾಯ ದೈವಸ್ಥಾನದ ಆಡಳಿತ ಕಮಿಟಿಯ ಗೌರವಾಧ್ಯಕ್ಷ ರವಿ ಪ್ರಸನ್ನ ಕೊಂಡಾಣ ದೇವಸ್ಥಾನಕ್ಕೆ ಆಗಮಿಸಿ ತಪ್ಪುಕಾಣಿಕೆ ಹಾಕಿ ಬೇಷರತ್ ಕ್ಷಮೆಯಾಚಿಸುವ ಮೂಲಕ ತಾರ್ಕಿಕ ಅಂತ್ಯ ಕೊಡಲು ಪ್ರಯತ್ನಿಸಿದ್ದಾರೆ. ರಿಷಭ್ ಶೆಟ್ಟಿ ವಾರಾಹಿ ಪಂಜುರ್ಲಿಗೆ ಸಲ್ಲಿಸಿದ್ದ ಹರಕೆ ನೇಮದಲ್ಲಿ ದೈವ ನರ್ತಕ ಅತಿರೇಕವಾಗಿ ವರ್ತಿಸಿದ್ದಾರೆಂದು ಸಾಮಾಜಿಕ ಜಾಲತಾಣದಲ್ಲಿ ಟೀಕೆ ಕೇಳಿಬಂದಿತ್ತು. ಈ ನೇಮದ ಬಗ್ಗೆ ದೈವಾರಾಧಕ ತಮ್ಮಣ್ಣ ಶೆಟ್ಟಿಯವರು ಆಕ್ಷೇಪ ವ್ಯಕ್ತಪಡಿಸಿದ್ದರು. ಇದರಿಂದ ಸ್ವತಃ ಕದ್ರಿ ಬಾರೆಬೈಲಿನ ಜಾರಂದಾಯ ದೈವಸ್ಥಾನದ ಆಡಳಿತ ಕಮಿಟಿಯ ಗೌರವಾಧ್ಯಕ್ಷ ರವಿ ಪ್ರಸನ್ನ ಸುದ್ದಿಗೋಷ್ಠಿ ನಡೆಸಿ ಹರಕೆ ನೇಮದ ಬಗ್ಗೆ ನಮಗೆ ಯಾವುದೇ ರೀತಿಯ ಸಂಶಯಗಳಿಲ್ಲ. ದೈವ ನರ್ತನದ ಬಗ್ಗೆಯೂ ಆಕ್ಷೇಪವಿಲ್ಲ ಎಂದಿದ್ದರು. ಆದರೆ ತಮ್ಮಣ್ಣ ಶೆಟ್ಟಿ ವಿರುದ್ಧ ವೈಯಕ್ತಿಕವಾಗಿಕೊಂಡಾಣ ಮತ್ತು ಷಣ್ಮುಖ ದೇವಸ್ಥಾನದ ದೇವರ ಚಿನ್ನವನ್ನುಅಡವಿಟ್ಟಿದ್ದಾರೆಂದು ಆರೋಪಿಸಿದ್ದರು. ಇದಕ್ಕೆ ಪ್ರತಿಯಾಗಿ ತಮ್ಮಣ್ಣ ಶೆಟ್ಟಿಯವರುತಮ್ಮ ಮೇಲಿನ ಕಳವು ಆರೋಪವನ್ನು ರವಿ ಪ್ರಸನ್ನರು ಸಾಬೀತು ಪಡಿಸಲಿ ಎಂದು ಸವಾಲೆಸೆದಿದ್ದರು.

## ಗ್ರಾಮೀಣ ಪುನರ್ವಸತಿ ಕಾರ್ಯಕರ್ತ ಹುದ್ದೆ : ಅರ್ಜಿ ಆಹ್ವಾನ

ಮಂಗಳೂರು – ವಿಕಲಚೇತನರಿಗೆ ವಿಕಲಚೇತನರ ಮೂಲಕವೇ ಅವರು ವಾಸಿಸುವ ವ್ಯಾಪ್ತಿಯಲ್ಲಿ ಶೈಕ್ಷಣಿಕ ಉದ್ಯೋಗ ತರಬೇತಿ, ಆರ್ಥಿಕ ಪುನರ್ವಸತಿ ಮತ್ತು ಸಾಮಾಜಿಕ ಭದ್ರತೆ ಸೌಲಭ್ಯವನ್ನು ಕಲ್ಪಿಸುವ ದೃಷ್ಟಿಯಿಂದ ಪುನರ್ವಸತಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರನ್ನು ನೇಮಕ ಮಾಡುವ ಸಲುವಾಗಿ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂ:0824-2455999, ಸಂಪರ್ಕಿಸಬಹುದು ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

## ದೇವಸ್ಥಾನ ವ್ಯವಸ್ಥಾಪನಾ ಸಮಿತಿ ರಚಿಸಲು ಅರ್ಜಿ ಆಹ್ವಾನ

ಮಂಗಳೂರು-ದ.ಕ ಜಿಲ್ಲೆಯ ಪ್ರವರ್ಗ "ಸಿ" ವರ್ಗದ ದೇವಸ್ಥಾನಗಳಿಗೆ 9 ಜನ ಸದಸ್ಯರಿರುವ ವ್ಯವಸ್ಥಾಪನಾ ಸಮಿತಿಯನ್ನು ರಚಿಸುವ ಸಲುವಾಗಿ ಆಸಕ್ತ ಭಕ್ತಾಧಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ, ನಿಗಧಿತ ಅರ್ಜಿಗಾಗಿ ಪಡೀಲ್ "ಪ್ರಜಾಸೌಧ" ಕಟ್ಟಡದಲ್ಲಿರುವ ಧಾರ್ಮಿಕ ದತ್ತಿ ಇಲಾಖೆ ಸಹಾಯಕ ಆಯುಕ್ತರ ಕಚೇರಿ ಸಂಪರ್ಕಿಸಬಹುದು

## ಉಚಿತ ಅಣಬೆ ಬೇಸಾಯ ತರಬೇತಿ ಶಿಬಿಡಿ: ಅರ್ಜಿ ಆಹ್ವಾನ

ಶಿವಮೊಗ್ಗ : ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ದಿ:05/01/2026ರಿಂದ 10 ದಿನಗಳ ಕಾಲ ನಿರುದ್ಯೋಗಿ ಪುರುಷರಿಗೆ ಮತ್ತು ಮಹಿಳೆಯರಿಗೆ ಉಚಿತ ಅಣಬೆ ಬೇಸಾಯ ತರಬೇತಿ ಶಿಬಿರವನ್ನು ಏರ್ಪಡಿಸಿದ್ದು, ಸ್ವಯಂ ಉದ್ಯೋಗಿಗಳಾಗಲು ಬಯಸುವ 18 ರಿಂದ 50 ವರ್ಷ ವಯಸ್ಸಿನ ನಿರುದ್ಯೋಗಿ ಪುರುಷರು ಮತ್ತು ಮಹಿಳೆಯರಿಂದ ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗೆ 8970476050/ 9591514154/ 9686248369/ 6363139123/ 9505894247 ಗಳನ್ನು ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದೆಂದು ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಕಲಚೇತನರ ರಿಯಾಯಿತಿ ಬಸ್ ಪಾಸ್/ನವೀಕರಣಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ : 2026ನೇ ಸಾಲಿಗೆ ವಿಕಲಚೇತನರ ರಿಯಾಯಿತಿ ಬಸ್ ಪಾಸ್‌ಗಳ ವಿತರಣೆ/ನವೀಕರಣಕ್ಕೆ "ಸೇವಾ ಸಿಂಧು" ಆನ್‌ಲೈನ್ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬಹುದು. ದಿ.30/12/2025ರಿಂದ ದಿ.28/02/2026 ರವರೆಗೆ https://serviceonline.gov.in.karnataka/URL ಬಳಸಿ ಅರ್ಜಿ ಸಲ್ಲಿಸುವುದು ಕಡ್ಡಾಯ. ನಿಗದಿ ಪಡಿಸಿದ ದಿನಾಂಕದ ಒಳಗೆ ಪಾಸ್‌ಗಳ ವಿತರಣೆ / ನವೀಕರಿಸಬೇಕಾಗಿರುತ್ತದೆ.

## ಸನ್ನದುಗಳ ಹರಾಜು : ಬಿಡ್ಡು ಆಹ್ವಾನ

ಮಡಿಕೇರಿ – ಅಬಕಾರಿ ಇಲಾಖೆಯಲ್ಲಿ ಸ್ಥಗಿತಗೊಂಡಿರುವ/ಮಂಜೂರಾಗದೇ ಬಾಕಿ ಉಳಿದಿರುವ ಸನ್ನದುಗಳನ್ನು ಭಾರತ ಸರ್ಕಾರದ ಸ್ವಾಮ್ಯದ ಸಂಸ್ಥೆಯಾದ ಎಂಎಸ್‌ಟಿಸಿ ಲಿಮಿಟೆಡ್‌ನ ಇಪೋರ್ಟಲ್‌ನಲ್ಲಿ ಇ-ಹರಾಜು ಮಾಡಲು ವೆಬ್‌ಸೈಟ್ https://www.mstcecommerce.com ಮೂಲಕ ಅರ್ಹ ಬಿಡ್ಡರ್‌ಗಳಿಂದ ಬಿಡ್ಡುಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮಡಿಕೇರಿ ದೂರವಾಣಿ ಸಂಖ್ಯೆ 9742999912, ಸೋಮವಾರಪೇಟೆ, ಕುಶಾಲನಗರ ದೂರವಾಣಿ ಸಂಖ್ಯೆ 9449252456, 9743251286, ವಿರಾಜಪೇಟೆ ಮತ್ತು ಪೊನ್ನಂಪೇಟೆ ದೂ.ಸಂ. 8310830520 ಮತ್ತು 9113887472 ಕಚೇರಿಯನ್ನು ಸಂಪರ್ಕಿಸಬಹುದು ಎಂದು ಅಬಕಾರಿ ಉಪ ಆಯುಕ್ತರು ತಿಳಿಸಿದ್ದಾರೆ.

## ಕರಾಮುವಿ 21ನೇ ವಾರ್ಷಿಕ ಘಟಿಕೋತ್ಸವಕ್ಕೆ ಅರ್ಜಿ ಆಹ್ವಾನ

ಮಡಿಕೇರಿ ಡಿ. 20 (ಕರ್ನಾಟಕ ವಾರ್ತೆ):- ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 21 ನೇ ವಾರ್ಷಿಕ ಘಟಿಕೋತ್ಸವವು ಜನವರಿ ಮಾಹೆಯ ಕೊನೆಯ ವಾರದಲ್ಲಿ ನಡೆಸಲು ತೀರ್ಮಾನಿಸಲಾಗಿದ್ದು, 2013-14 ಮತ್ತು 2014-15ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶಾತಿ ಪಡೆದು ಪದವಿ ಪೂರ್ಣಗೊಳಿಸಿರುವ ಶೈಕ್ಷಣಿಕ ಸಾಲಿನ ವಿದ್ಯಾರ್ಥಿಗಳು ಪದವಿ ಪ್ರಮಾಣ ಪತ್ರ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ 9483570900, 9844395986, 8296215714, 9611320191, 9473576338ನ್ನು ಸಂಪರ್ಕಿಸುವಂತೆ ಕರಮುವಿ ಮಡಿಕೇರಿ ಪ್ರಾದೇಶಿಕ ನಿರ್ದೇಶಕಿ ಸ್ಮಿತಾ ಸುಬ್ಬಯ್ಯ ಅವರು ತಿಳಿಸಿದ್ದಾರೆ.

## ಮೂಡಂಬೈಲು ಗೋಪಾಲಕೃಷ್ಣ ಶಾಸ್ತ್ರಿ ಅವರಿಗೆ ಶೇಣಿ ಪ್ರಶಸ್ತಿ




ಮಂಗಳೂರು: ಯಕ್ಷಗಾನದ ಭೀಷ್ಮ, ಹರಿದಾಸ ಡಾ. ಶೇಣಿ ಗೋಪಾಲಕೃಷ್ಣ ಭಟ್ ಅವರ ಹೆಸರಿನಲ್ಲಿ ಎರಡು ದಶಕಗಳಿಂದ ಕಾರ್ಯ ನಿರ್ವಹಿಸುತ್ತಿರುವ ಟ್ರಸ್ಟ್ 2025ನೇ ಸಾಲಿನ ಶೇಣಿ ಪ್ರಶಸ್ತಿಗೆ ಹಿರಿಯ ತಾಳಮದ್ದಳೆ ಅರ್ಥದಾರಿ, ಪ್ರವಚನಕಾರ ಮೂಡಂಬೈಲು ಗೋಪಾಲಕೃಷ್ಣ ಶಾಸ್ತ್ರಿ ಅವರು ಆಯ್ಕೆಯಾಗಿದ್ದಾರೆ ಎಂದು ಟ್ರಸ್ಟ್‌ನ ಅಧ್ಯಕ್ಷ ಕೆ. ಮಹಬಲ ಶೆಟ್ಟಿ ತಿಳಿಸಿದರು. ಅವರು ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾತನಾಡಿ, ಡಿ.25 ರಂದು ಪ್ರಶಸ್ತಿ ಪ್ರಧಾನ ಕಾರ್ಯಕ್ರಮ ನಗರದ ಉರ್ವಸ್ಟೋರ್‌ನ ಶ್ರೀ ಮಹಾಗಣಪತಿ ದೇವಸ್ಥಾನದ ಆವರಣದಲ್ಲಿ ನಡೆಯಲಿದ್ದು, ಪ್ರಶಸ್ತಿಯು 30 ಸಾವಿರ ತಲಾ ರೂ. ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ ಎಂದರು.

## ರಾಮಕೃಷ್ಣ ಮಿಷನ್‌ನಲ್ಲಿ ನಡೆಯಲಿದೆ ಹರಿಕಥಾ ಸ್ಪರ್ಧೆ – 2025




ಮಂಗಳೂರು: ಹರಿಕಥಾ ಪರಿಷತ್ ಮಂಗಳೂರು ಹಾಗೂ ರಾಮಕೃಷ್ಣ ಮಿಷನ್ ಮಂಗಳೂರು ಇದರ ಸಂಯುಕ್ತ ಆಶ್ರಯದಲ್ಲಿ ಸಿಎ ಎಸ್ ಎಸ್ ನಾಯಕ್ ಪ್ರಾಯೋಜಕತ್ವದಲ್ಲಿ, ಎಸ್‌ಕೆಜಿ ಇಂಡಸ್ಟ್ರಿಯಲ್ ಕೋ-ಆಪರೇಟಿವ್ ಸೊಸೈಟಿ ಲಿ., ಆತ್ಮಶಕ್ತಿ ವಿವಿಧೋದ್ದೇಶ ಸಹಕಾರಿ ಬ್ಯಾಂಕ್ ಲಿ. ಹಾಗೂ ಗ್ರಾಮ ಸಂಘ ಸಹಕಾರದ ವತಿಯಿಂದ ಕರಾವಳಿಯಲ್ಲಿ ಮೊದಲ ಬಾರಿಗೆ ರಾಜ್ಯದ ವಿದ್ಯಾರ್ಥಿಗಳಿಗೆ ಡಿ.27 ರಂದು 'ಹರಿಕಥಾ ಸ್ಪರ್ಧೆ-2025 ಮಂಗಳೂರಿನ ರಾಮಕೃಷ್ಣ ಮಿಷನ್‌ನಲ್ಲಿ ನಡೆಯಲಿದೆ ಎಂದು ಪ್ರಧಾನ ಕಾರ್ಯದರ್ಶಿ ತೋನ್ಸೆ ಪುಷ್ಕಳ ಕುಮಾರ್ ತಿಳಿಸಿದರು. ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಕರೆದ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾತನಾಡಿ, ಬೆಂಗಳೂರು, ಶಿವಮೊಗ್ಗ, ಬಾಗಲಕೋಟೆ ಸೇರಿದಮತೆ ವಿವಿಧ ಜಿಲ್ಲೆಗಳಿಂದ ಆಯ್ದ 23 ಮಂದಿ ಯುವ ಕಥಾಕೀರ್ತನ ಪ್ರತಿಭೆಗಳಿಗೆ ಅವಕಾಶ ನೀಡಲಾಗಿದೆ ಎಂದರು.

## ಹುಲಿ ಉಳಿಸಿ ಉಪಕ್ರಮಕ್ಕೆ ಇನ್ನಷ್ಟು ವೇಗ – ಜಿಲ್ಲಾಧಿಕಾರಿ




ಮಂಗಳೂರು : ಕರಾವಳಿ ಉತ್ಸವ ಅಂಗವಾಗಿ ಪಿಲಿಕುಳ ಜೈವಿಕ ಉದ್ಯಾನವನದಲ್ಲಿ ಜನಿಸಿದ ಹುಲಿ ಮರಿಗಳನ್ನು ಮೊದಲ ಬಾರಿಗೆ ಸಾರ್ವಜನಿಕ ವೀಕ್ಷಣೆಗೆ ಬಿಡುಗಡೆ ಮಾಡುವ ಹಾಗೂ ದತ್ತು (ಪ್ರಾಯೋಜಕತ್ವ) ಯೋಜನೆಗೆ ಚಾಲನೆ ನೀಡಿ ಮಾತನಾಡಿದ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ. ಅವರು ಶ್ರೀಂಗೇರಿ ಮತ್ತು ಹರಿಹರಪುರದಲ್ಲಿ ಕಳೆದ ತಮ್ಮ ಬಾಲ್ಯದ ದಿನಗಳನ್ನು ಸ್ಮರಿಸಿದರು. "ಈ ದಿನಗಳಲ್ಲಿ ಕಾಡಿನಲ್ಲಿ ಹುಲಿಯನ್ನು ನೋಡುವುದಕ್ಕೂ ಸಹ ಭಾಗ್ಯಬೇಕಾಗಿದೆ," ಎಂದು ಜಿಲ್ಲಾಧಿಕಾರಿ ಹೇಳಿದರು. ಡಿಜಿಟಲೀಕರಣದ ಯುಗದಲ್ಲಿ 'ಹುಲಿಯನ್ನು ಉಳಿಸಿ' (Save the Tiger) ಉಪಕ್ರಮಕ್ಕೆ ಮುಂದಿನ ದಿನಗಳಲ್ಲಿ ಇನ್ನಷ್ಟು ವೇಗ ಸಿಗಲಿದೆ ಎಂಬ ಆಶಯವನ್ನು ಅವರು ವ್ಯಕ್ತಪಡಿಸಿದರು. ಜೊತೆಗೆ ಉದ್ಯಾ ನವನದ ಮುಂದಿನ ಹುಲಿಯನ್ನು ದತ್ತಕ ಪಡೆಯುವಲ್ಲಿ ತಾವೇ ಮೊದಲಿಗರಾಗುವುದಾಗಿ ತಿಳಿಸಿದರು. ಒಂದು ವರ್ಷದ ವಯಸ್ಸು ತುಂಬಿದ ಒಲಿವರ್ ಮತ್ತು ಟೆನ್ನಿಸನ್ ಎಂಬ ಹುಲಿ ಮರಿಗಳು ಚೆನ್ನಾಗಿ ಬೆಳೆಯಲಿ ಹಾಗೂ ಪಿಲಿಕುಳ ಜೈವಿಕ ಉದ್ಯಾನವನದ ಬ್ರ್ಯಾಂಡ್ ರಾಯಭಾರಿಗಳಾಗಿ ರೂಪುಗೊಳ್ಳಲಿ ಎಂದು ಅವರು ಹಾರೈಸಿದರು.

## ಮಂಗಳೂರು ಕಮಿಷನರ್‌ರಿಂದ ಅಂಕಿ-ಅಂಶ ಸಮೇತ ತಿರುಗೇಟು



ಮಂಗಳೂರು : ಬಂಟ್ವಾಳದ ಅಬ್ದುಲ್ ರೆಹಮಾನ್ ಹತ್ಯೆ ಪ್ರಕರಣದ ತನಿಖಾ ವೈಫಲ್ಯ ಖಂಡಿಸಿ ಕಳೆದ ಶುಕ್ರವಾರ ನಡೆದ ಪ್ರತಿಭಟನೆಯ ವೇಳೆ, ಮಂಗಳೂರು ಪೊಲೀಸರು ಕೇವಲ ಮುಸ್ಲಿಂ ಸಂಘಟನೆಗಳನ್ನು ಗುರಿಯಾಗಿಸುತ್ತಿದ್ದಾರೆ ಎಂದು SDPI ಮಾಡಿದ್ದ ಆರೋಪಕ್ಕೆ ನಗರ ಪೊಲೀಸ್ ಆಯುಕ್ತರು ಅಂಕಿ-ಅಂಶಗಳ ಸಹಿತ ಸ್ಪಷ್ಟಪಡಿಸಿದ್ದಾರೆ. ಪ್ರತಿಭಟನೆಗೆ ಅನುಮತಿ ನೀಡಲು ಮುಸ್ಲಿಂ ಸಂಘಟನೆಗಳಿಂದ ಮಾತ್ರ ಮುಚ್ಚಳಿಕೆ ಬರೆಸಿಕೊಳ್ಳಲಾಗುತ್ತಿದೆ, ಆದರೆ ಹಿಂದೂ ಸಂಘಟನೆಗಳಿಗೆ ಇಂತಹ ಯಾವುದೇ ನಿಯಮ ಅನ್ವಯಿಸುತ್ತಿಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದರು. SDPI ಆರೋಪಕ್ಕೆ ತೀಕ್ಷ್ಣವಾಗಿ ಪ್ರತಿಕ್ರಿಯಿ ಸಿರುವ ಮಂಗಳೂರು ನಗರ ಪೊಲೀಸ್ ಆಯುಕ್ತ ಸುಧೀರ್ ರೆಡ್ಡಿ, ಪೊಲೀಸರು ಯಾವುದೇ ಧರ್ಮದ ಆಧಾರದ ಮೇಲೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಈವರೆಗೆ ಒಟ್ಟು 895 ಜನರಿಂದ ಮುಚ್ಚಳಿಕೆ ಬರೆಸಿಕೊಳ್ಳಲಾಗಿದ್ದು, ಅದರಲ್ಲಿ 521 ಜನರು ಹಿಂದೂಗಳು, 351 ಮುಸ್ಲಿಮರು ಹಾಗೂ ಇತರ ಧರ್ಮದವರು 30 ಜನರಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ. ಬಾಂಡ್ ಬರೆಸಿಕೊಂಡವರ ವಿವರಗಳನ್ನು ನೀಡಿದ ಆಯುಕ್ತರು, ಹಿಂದೂಗಳ ಪೈಕಿ 474 ರೌಡಿಶೀಟರ್‌ಗಳು ಹಾಗೂ 57 ಹಳೆಯ ಅಪರಾಧಿಗಳಿದ್ದಾರೆ. ಮುಸ್ಲಿಮರ ಪೈಕಿ 321 ರೌಡಿಶೀಟರ್‌ಗಳು ಹಾಗೂ 30 ಹಳೆಯ ಅಪರಾಧಿಗಳಿದ್ದಾರೆ ಎಂದರು.

## ಇತರ ಗ್ರಾಮಗಳಿಗೂ ಮಾದರಿಯಾಗಲಿ-ನರೇಂದ್ರ ನಾಯಕ್



ಮಂಗಳೂರು: ಅಡ್ಯಾರು ಗ್ರಾಮ ಪಂಚಾ ಯತ್, ಪ್ರಕೃತಿ ಸಂಜೀವಿನಿ ಒಕ್ಕೂಟ ಹಾಗೂ ಸಹ್ಯಾದ್ರಿ ಕಾಲೇಜ್ ಆಫ್ ಇಂಜಿನಿಯರಿಂಗ್ & ಮ್ಯಾನೇಜ್‌ಮೆಂಟ್ ಇದರ ಸಂಯುಕ್ತ ಆಶ್ರಯದಲ್ಲಿ 'ಅಡ್ಯಾರು ಗ್ರಾಮೋತ್ಸವ-2025' ಕಾರ್ಯಕ್ರಮವು ಸಹ್ಯಾದ್ರಿ ಕಾಲೇಜು ಮೈದಾನ ಅಡ್ಯಾರಿನಲ್ಲಿ ವಿಜೃಂಭಣೆಯಿಂದ ಜರುಗಿತು. 'ಸೌಹಾರ್ದಯುತ ಗ್ರಾಮ-ಸೌಹಾರ್ದಯುತ ಭಾರತ' ಎಂಬ ಸಂದೇಶದೊಂದಿಗೆ ಆಯೋಜಿಸಲಾಗಿರುವ ಈ ಗ್ರಾಮೋತ್ಸವದ ಮುನ್ನ ವಿವಿಧ ಶಾಲಾ ಮಕ್ಕಳ ಆಕರ್ಷಕ ಪಥಸಂಚಲನ, ಡ್ರೋನ್ ಹಾರಾಟ, ಜಾನಪದ ನೃತ್ಯ ನಡೆಯಿತು. ಕಾರ್ಯಕ್ರಮವನ್ನು ಪಾರಿವಾಳ ಹಾರಿಸುವ ಮೂಲಕ ಚಾಲನೆ ಗಣ್ಯರು ಚಾಲನೆ ನೀಡಿದರು. ಎಕ್ಸ್‌ಪರ್ಟ್ ಎಜುಕೇಷನಲ್ & ಚಾರಿಟೇಬಲ್ ಟ್ರಸ್ಟ್ ನಿರ್ದೇಶಕ ನರೇಂದ್ರ ನಾಯಕ್ ರಿಬ್ಬನ್ ಕತ್ತರಿಸುವ ಮೂಲಕ ಸ್ವಸಹಾಯ ಗುಂಪುಗಳ ಮಾರಾಟ ಮಳಿಗೆಗಳಿಗೆ ಚಾಲನೆ ನೀಡಿದರಲ್ಲದೆ, ತೆಂಗಿನ ಸಿರಿಯನ್ನು ಅರಳಿಸುವ ಮೂಲಕ ಉದ್ಘಾಟನಾ ಸಮಾರಂಭ ನೆರವೇರಿಸಿದರು.

## ಜಾತ್ರಾ ಕೋಳಿ ಅಂಕ: ಬಂದಿತರನ್ನು ಬಿಡಿಸಿದ ಕಿಶೋರ್ ಕುಮಾರ್



ಪುತ್ತೂರು: ವಿಟ್ಲ ಸಮೀಪದ ಇತಿಹಾಸ ಪ್ರಸಿದ್ಧ ಕೇಪು ಉಳ್ಳಾಲ್ತಿ ದೈವಸ್ಥಾನದ ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ, ಪುರಾತನ ಕಾಲದಿಂದ ನಡೆದುಕೊಂಡು ಬರುತ್ತಿ ರುವ ಹರಕೆ ರೂಪದ ಕೋಳಿ ಅಂಕ ಕಾರ್ಯಕ್ರಮದ ವೇಳೆ ಪೊಲೀಸರು ದಾಳಿ ನಡೆಸಿ 17 ಮಂದಿ ಭಕ್ತರನ್ನು ವಶಕ್ಕೆ ಪಡೆದ ಘಟನೆ ನಡೆದಿದ್ದು, ಈ ವಿಷಯ ತಿಳಿದ ತಕ್ಷಣ ವಿಧಾನ ಪರಿಷತ್ ಶಾಸಕರಾದ ಶ್ರೀ ಕಿಶೋರ್ ಕುಮಾರ್ ಪೊಲೀಸ್ ಠಾಣೆಗೆ ತೆರಳಿ ಹಿರಿಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ, ಧಾ ರ್ಮಿಕ ಆಚರಣೆಯ ಹಿನ್ನೆಲೆ ಮತ್ತು ಸ್ಥಳೀಯ ಸಂಪ್ರದಾಯದ ಮಹತ್ವವನ್ನು ಅಧಿಕಾರಿಗಳಿಗೆ ಮನವರಿಕೆ ಮಾಡಿಕೊಟ್ಟು, ವಶಕ್ಕೆ ಪಡೆಯಲಾದ ಭಕ್ತರನ್ನು ಬಿಡುಗಡೆಗೊಳಿಸುವಲ್ಲಿ ಯಶಸ್ವಿಯಾಗಿದ್ದಾರೆ. ಈ ಸಂದರ್ಭದಲ್ಲಿ ಶಾಸಕರು ಮಾತನಾಡಿ, "ಇದು ಯಾವುದೇ ರೀತಿಯ ಜೂಜಾಟವಲ್ಲ. ಇದು ಕೇವಲ ಜಾನಪದ ಕ್ರೀಡೆ ಮಾತ್ರವಲ್ಲದೆ, ದೈವದ ಸನ್ನಿಧಿಯಲ್ಲಿ ಭಕ್ತರು ತಮ್ಮ ಹರಕೆಯನ್ನು ತೀರಿಸುವ ಪವಿತ್ರ ಆಚರಣೆ. ಶತಮಾನಗಳಿಂದ ನಡೆದುಕೊಂಡು ಬಂದಿರುವ ಈ ಸಂಪ್ರದಾಯವನ್ನು ಕಾನೂನುಬಾಹಿರ ಚಟುವಟಿಕೆಯಂತೆ ಪರಿಗಣಿಸುವುದು ಸರಿಯಲ್ಲ. ಇದು ನಂಬಿಕೆ, ಶ್ರದ್ಧೆ ಮತ್ತು ಭಕ್ತಿಯ ಪ್ರತೀಕ" ಎಂದು ಹೇಳಿದರು.

## ಮಂಗಳೂರು ತಲುಪಿದ 'ಮೆ। ಸೆವೆನ್ ಸೀ ನೇವಿಗೇಟರ್' ಹಡಗು



ಮಂಗಳೂರು: ನವಮಂಗಳೂರು ಬಂದರಿನಲ್ಲಿ 2025-26ನೇ ಪ್ರವಾಸಿ ಋತು ಆರಂಭವಾಗಿದ್ದು, ಈ ಋತುವಿನ ಮೊದಲ ಐಷಾರಾಮಿ ಪ್ರವಾಸಿ ಹಡಗು 'ಮೆ। ಸೆವೆನ್ ಸೀ ನೇವಿಗೇಟರ್' ಬಂದರನ್ನು ತಲುಪಿತು. ಬಹಮಾಸ್ ಧ್ವಜವನ್ನು ಹೊಂದಿರುವ 'ಮೆ।ಸೆವೆನ್ ಸೀಸ್ ನೇವಿಗೇಟರ್' ಹಡಗು ಮರ್ಮ ಗೋವಾ ಬಂದರಿನಿಂದ ಹೊರಟು, ಸೋಮವಾರ ಮುಂಜಾನೆ 6.15 ನವಮಂಗಳೂರು ಬಂದರನ್ನು ತಲುಪಿತು. ಬಂದರಿನ 4ನೇ ದಕ್ಕೆಯಲ್ಲಿ ಅದನ್ನು ನಿಲುಗಡೆ ಮಾಡಲಾಯಿತು. ಹಡಗಿನಲ್ಲಿ 450 ಪ್ರಯಾಣಿ ಕರು ಹಾಗೂ 360 ಸಿಬ್ಬಂದಿ ಇದ್ದರು. 172.50 ಮೀ ಉದ್ದದ ಈ ಹಡಗಿನ ಒಟ್ಟು ಆಂತರಿಕ ಗಾತ್ರ 28,803 ಜಿಆರ್‌ಟಿ. ಹಡಗಿನಲ್ಲಿ ಬಂದಿಳಿದ ಅಂತರರಾಷ್ಟ್ರೀಯ ಪ್ರವಾಸಿಗರಿಗೆ ಈ ಪ್ರದೇಶದ ಸಾಂಸ್ಕೃತಿಕ ಪರಂಪರೆಯನ್ನು ಪರಿಚ ಯಿಸುವ ಮೂಲಕ ನವಮಂಗಳೂರು ಬಂದರು ಪ್ರಾಧಿಕಾರ (ಎನ್‌ಎಂಪಿಎ) ವತಿಯಿಂದ ಸಾಂಪ್ರದಾಯಿಕ ರೀತಿಯಲ್ಲಿ ಭವ್ಯ ಸ್ವಾಗತ ಕೋರಲಾಯಿತು. ಕಸ್ಟಮ್ಸ್ ಇಲಾಖೆಯ ಆಯುಕ್ತರಾದ ವನಿತಾ ಶೇಖರ್ ಬಂದರಿನ ಅಧಿಕಾರಿಗಳ ಜೊತೆಗೆ ತೆರಳಿ ಹಡಗಿನ ಕ್ಯಾಪ್ಟನ್ ಅವರನ್ನು ಬರಮಾಡಿಕೊಂಡರು.

## ವಿದ್ಯಾರ್ಥಿಗಳಿಲ್ಲದ ಕಾಲೇಜುಗಳನ್ನು ಮುಚ್ಚಲು ಅನುಮೋದನೆ



ಮಂಗಳೂರು: ಮಂಗಳೂರು ವಿಶ್ವವಿದ್ಯಾಲಯ ಅಧೀನದ 22 ಖಾಸಗಿ ಕಾಲೇಜುಗಳು ವಿದ್ಯಾರ್ಥಿಗಳ ಪ್ರವೇಶಾತಿ ಇಲ್ಲದ ಕಾರಣ ಮುಚ್ಚಲಿವೆ. ವಿವಿ ಕುಲಪತಿ ಪ್ರೊ.ಪಿ.ಎಲ್.ಧರ್ಮ ಅಧ್ಯಕ್ಷತೆಯಲ್ಲಿ ಆನ್‌ಲೈನ್ ಮೂಲಕ ನಡೆದ ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಇದಕ್ಕೆ ಅನುಮೋದನೆ ನೀಡಲಾಗಿದೆ. ಆಬಾ ವುಮೆನ್ಸ್ ಫಸ್ಟ್ ಗ್ರೇಡ್ ಕಾಲೇಜು ಸುರತ್ಕಲ್, ಅಂಜುಮನ್ ಫಸ್ಟ್ ಗ್ರೇಡ್ ಕಾಲೇಜು ಮಂಗಳೂರು, ಅಮೃತ ಕಾಲೇಜ್ ಪಡೀಲ್, ಸಿಲಿಕಾನ್ ಕಾಲೇಜ್ ಆಫ್ ಅಡ್ವಾನ್ಸ್‌ಡ್ ಕಾಲೇಜು ಕೊಂಚಾಡಿ, ಮೋಗ್ಲಿಂಗ್ ಇನ್‌ಸ್ಟಿಟ್ಯೂಟ್ ಆಫ್ ಜರ್ಮನ್ ಲಾಂಗ್ವೇಜ್ ಬಲ್ಮಠ, ಸರ್ಸ ಕಾಲೇಜ್ ಆಫ್ ಆರ್ಟ್ಸ್ ಆಂಡ್ ಸೈನ್ಸ್ ಮಂಗಳೂರು, ರೊಸಾರಿಯೊ ಕಾಲೇಜ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ಬೋಳಾರ, ಕರಾವಳಿ ಕಾಲೇಜ್ ಆಫ್ ಎಜುಕೇಶನ್, ಪ್ರೇಮಕಾಂತಿ ಕಾಲೇಜ್ ಆಫ್ ಎಜುಕೇಶನ್ ಸೇಪಿಯೆನ್ಶಿಯ ಬೆಥನಿ ಫಸ್ಟ್ ಗ್ರೇಡ್ ಕಾಲೇಜು ನೆಲ್ಯಾಡಿ, ಶಾರದಾ ವುಮೆನ್ಸ್ ಕಾಲೇಜ್ ಸುಳ್ಯ, ರಾಮಕುಂಜೇಶ್ವರ ಕಾಲೇಜ್, ಹಝ್ರತ ಸಯ್ಯದ್ ಮದನಿ ವುಮೆನ್ಸ್ ಕಾಲೇಜ್ ಉಳ್ಳಾಲ, ಸಂಯ ಸೆಬಾಸ್ಟಿಯನ್ ಕಾಲೇಜ್ ಆಫ್ ಕಾಮರ್ಸ್, ಸಂತ ಥೋಮಸ್ ಕಾಲೇಜ್ ಬೆಳ್ತಂಗಡಿ, ಮಾರ್ ಇವನಾಯ್ಸ ಕಾಲೇಜ್ ಕಡಬ, ಮಾಧ ವ ಪೈ ಕಾಲೇಜ್ ಮಣಿಪಾಲ, ಮೂಕಾಂಬಿಕಾ ಫಸ್ಟ್ ಗ್ರೇಡ್ ಕಾಲೇಜ್ ಬೈಂದೂರು, ವರಸಿದ್ಧಿ ವಿನಾಯಕ ಫಸ್ಟ್ ಗ್ರೇಡ್ ಕಾಲೇಜು ಕುಂದಾಪು ರ, ಬಿ.ಡಿ.ಶೆಟ್ಟಿ ಕಾಲೇಜ್ ಆಫ್ ಬಿಸಿನೆಸ್ ಮ್ಯಾನೇಜ್‌ಮೆಂಟ್ ಐರೋಡಿ ಉಡುಪಿ, ವಿದ್ಯಾನಿಕೇತನ ಫಸ್ಟ್ ಗ್ರೇಡ್ ಕಾಲೇಜು ಕಾಪು, ಕೃಷ್ಣಬಾಯ್ ವಾಸುದೇವ ಶೆಣೈ ಮೆಮೊರಿ ಯಲ್ ಕಾಲೇಜು ಕಟಪಾಡಿ ಇವು ಮುಚ್ಚಲಿವೆ.

## ಧರ್ಮಾಧ್ಯಕ್ಷ ಡಾ. ಪೀಟರ್ ಪಾವ್ಲ್ ಸಾಲ್ಡಾನ್ಹರಿಂದ ಕ್ರಿಸ್‌ಮಸ್ ಸಂದೇಶ




ಮಂಗಳೂರು: ಕ್ರಿಸ್‌ಮಸ್ ಹಬ್ಬದ ಈ ಪವಿತ್ರ ಸಂದರ್ಭದಲ್ಲಿ, ಯೇಸು ಕ್ರಿಸ್ತರು ಈ ಜಗತ್ತಿಗೆ ತಂದ ಪ್ರೀತಿ, ಶಾಂತಿ ಮತ್ತು ಮಾನವೀಯತೆಯ ಶಾಶ್ವತ ಸಂದೇಶವನ್ನು ನಾವು ಇವತ್ತು ಕೃತಜ್ಞತೆಯಿಂದ ಸ್ಮರಿಸುತ್ತೇವೆ. ಈ ಹಬ್ಬವು ಸಮಾಜದಲ್ಲಿ ಸತ್ಯ, ನ್ಯಾಯ ಹಾಗೂ ಸಹಜೀವನದ ಮೌಲ್ಯಗಳನ್ನು ಮರುಸ್ಥಾಪಿಸುವ ವಿಶಿಷ್ಟ ಅವಕಾಶವನ್ನು ಒದಗಿಸುತ್ತದೆ ಎಂದು ನಾವು ಸ್ಪಷ್ಟವಾಗಿ ಹೇಳಬಹುದು. ನಮ್ಮ ಸಮಾಜದಲ್ಲಿ ಹಿಂಸೆ, ವಂಚನೆ, ತಪ್ಪು ಮಾಹಿತಿ ಮತ್ತು ಪರಸ್ಪರ ಅವಿಶ್ವಾಸವನ್ನು ಉತ್ತೇಜಿಸುವ ಸವಾಲುಗಳು ಹೆಚ್ಚುತ್ತಲೇ ಇವೆ. ಸಾರ್ವಜನಿಕ ವಲಯಗಳಲ್ಲಿ ಸತ್ಯ, ನ್ಯಾಯ, ಮತ್ತು ಸೌಹಾರ್ದ ಕುಂದುತ್ತಿರುವುದು ದೇಶದ ಭವಿಷ್ಯದ ಹಿತದೃಷ್ಟಿಯಿಂದ ಚಿಂತಾಜನಕವಾಗಿ ಪರಿಣಮಿಸಿವೆ. ವ್ಯಕ್ತಿಯ ಖಾಸಗಿತನ, ಗೌರವಯುತ ಜೀವನ, ಹಾಗೂ ಧಾರ್ಮಿಕ ಸ್ವಾತಂತ್ರ್ಯದಂತಹ ಮೂಲಭೂತ ಹಕ್ಕುಗಳು ದಿನದಿಂದ ದಿನಕ್ಕೆ ಅಪಾಯದ ಅಂಚಿಗೆ ಹೋಗುತ್ತಿವೆಯೇನೋ ಎಂಬಂತೆ ಕಾಣುತ್ತಿವೆ. ಜಾತಿ-ಧರ್ಮ-ಕುಲ-ಅಂತಸ್ತು ಇವುಗಳ ಆಧಾರದ ಮೇಲೆ ಒಬ್ಬರಿಗೊಬ್ಬರನ್ನು ಎತ್ತಿಕಟ್ಟುವುದು ಜಾಸ್ತಿಯಾಗುತ್ತಾ ಇದೆ. ಪ್ರತಿ ದಿನ ಸಾಕಷ್ಟು ಮುಗ್ಧ ಜನರು ವಂಚಕರ ಕೈಗಳಲ್ಲಿ ಬಲಿಪಶುಗಳಾಗುತ್ತಿದ್ದಾರೆ ಎಂಬ ಆಘಾತಕಾರಿ ಸಂಗತಿಯನ್ನು ಕೇಳಿ ಮನಕರಗುತ್ತದೆ. ಈ ಹಿನ್ನೆಲೆಯಲ್ಲಿ, ಯೇಸು ಕ್ರಿಸ್ತನ ಜನನದ ಹಬ್ಬವು ಸಮಾಜದ ಪ್ರತಿಯೊಬ್ಬ ನಾಗರಿಕನಿಗೂ ಹಾಗೂ ಪ್ರತಿಯೊಂದು ಸಂಸ್ಥೆಗೂ ಒಂದು ವಿಶೇಷ ಕರೆಯನ್ನು ನೀಡುತ್ತದೆ ಎಂದು ಧರ್ಮಾಧ್ಯಕ್ಷರು, ಮಂಗಳೂರು ಕಥೊಲಿಕ್ ಧರ್ಮಕ್ಷೇತ್ರದ ಅತೀ ವಂದನೀಯ ಡಾ। ಪೀಟರ್ ಪಾವ್ ಸಲ್ಡಾನ್ಹಾ ಹೇಳಿದರು.

# ಸುದ್ದಿ ತುಣುಕು

ಸಹೋದರಿಯ ಮನೆಗೇ ಕನ್ನ ಹಾಕಿದ ಸಹೋದರ ಮತ್ತು ಆತನ ಇಬ್ಬರು ಪುತ್ರರನ್ನು ಚಿಕ್ಕಬಳ್ಳಾಪುರ ಪೊಲೀಸರು ಬಂಧಿಸಿದ್ದಾರೆ.

ವಿದೇಶಿ ಕ್ರೀಡೆಗಳಿಗೆ ಕ್ರೀಡಾಂಗಣ ಮಾಡುವ ಸರ್ಕಾರ, ರೈತರ ಜನಪದ ಕ್ರೀಡೆಯಾದ ಹೋರಿ ಹಬ್ಬಕ್ಕೂ ಪ್ರತಿ ತಾಲೂಕಿನಲ್ಲಿ ಕ್ರೀಡಾಂಗಣ ಮಾಡಬೇಕು ಎಂದು ಹೋರಾಟಗಾರರು ಒತ್ತಾಯಿಸಿದ್ದಾರೆ.

ಗ್ಲಾಂಡರ್ಸ್ ಸೋಂಕಿನ ಭೀತಿ ಹಿನ್ನೆಲೆಯಲ್ಲಿ, ಮೈಸೂರಿನ 598 ಕುದುರೆಗಳ ರಕ್ತದ ಮಾದರಿಯನ್ನು ಬೆಂಗಳೂರಿನ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ.

ರಿಷಬ್ ಶೆಟ್ಟಿ ಪತ್ನಿ, ಪುತ್ರ ಹಾಗೂ ಪುತ್ರಿ ಸೇರಿ ಕುಟುಂಬ ಸಮೇತ ಮಂತ್ರಾಲಯಕ್ಕೆ ಭೇಟಿ ನೀಡಿದ್ದಾರೆ.

ಯುವತಿಯನ್ನು ಮದುವೆ ಮಾಡಿಕೊಡುವಂತೆ ಪೀಡಿಸಿದ ವ್ಯಕ್ತಿಯೋರ್ವ ನಿರಾಕರಿಸಿದ ಆಕೆಯ ತಾಯಿಗೆ ಬೆಂಕಿ ಹಚ್ಚಿರುವ ಘಟನೆ ಬೆಂಗಳೂರಿನ ಬಸವೇಶ್ವರನಗರದ ಭೋವಿ ಕಾಲೋನಿಯಲ್ಲಿ ನಡೆದಿದೆ.

ಉಳುಮೆ ಮಾಡುತ್ತಿದ್ದ ವೇಳೆ, ಹುಲಿ ದಾಳಿಯಿಂದ ಅದೃಷ್ಟವಶಾತ್ ಟ್ರ್ಯಾಕ್ಟರ್ ಚಾಲಕ ಹಾಗೂ ದನಗಾಹಿ ಬಾಲಕ ಪ್ರಾಣಾಪಾಯದಿಂದ ಪಾರಾಗಿರುವ ಘಟನೆ ಜಿಲ್ಲೆಯ ಹುಣಸೂರು ತಾಲೂಕಿನ ಹನಗೋಡು ಸಮೀಪದ ನೇಗತ್ತೂರಿನ ಶೆಟ್ಟಹಳ್ಳಿಯಲ್ಲಿ ನಡೆದಿದೆ.

ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಕೇಂದ್ರ ವಸತಿ ಹಾಗೂ ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಅವರನ್ನು ಭೇಟಿ ಮಾಡಿ ಬೆಂಗಳೂರಿನ ವಿವಿಧ ಅಭಿವೃದ್ಧಿ ಯೋಜನೆಗಳ ಬಗ್ಗೆ ಮನವಿ ಸಲ್ಲಿಸಿದರು.

ರೌಡಿ ಶೀಟರ್ ಶಿವಪ್ರಕಾಶ್ ಕೊಲೆ ಪ್ರಕರಣ ಸಂಬಂಧ ಶಾಸಕ ಬೈರತಿ ಬಸವರಾಜ್ ಸಲ್ಲಿಸಿದ್ದ ನಿರೀಕ್ಷಣಾ ಜಾಮೀನು ಅರ್ಜಿಯನ್ನು ವಿಶೇಷ ನ್ಯಾಯಾಲಯವು ವಜಾಗೊಳಿಸಿದೆ.

ಪವರ್ ಫೈಟ್ ಮಧ್ಯೆ ಮಾಜಿ ಸಚಿವ ಕೆ.ಎನ್. ರಾಜಣ್ಣರ ನಡೆ ಗದ್ದುಗೆ ಗುದ್ದಾಟಕ್ಕೆ ಇನ್ನಷ್ಟು ರೋಚಕತೆ ಮೂಡುವಂತೆ ಮಾಡಿದೆ. ರಾಜಣ್ಣ ಅವರು ಸಿಎಂ ಸಿದ್ದರಾಮಯ್ಯರನ್ನು ಭೇಟಿಯಾಗಿ ಸಮಾಲೋಚನೆ ನಡೆಸಿರುವುದು ಮತ್ತಷ್ಟು ರಾಜಕೀಯ ಕುತೂಹಲ ಹುಟ್ಟುಹಾಕಿದೆ.

ಕಾರಾಗೃಹ ವಿಭಾಗದ ನೂತನ ಡಿಜಿಪಿ ಅಲ ಕುಮಾರ್ ಮಂಗಳೂರು ಜಿಲ್ಲಾ ಕಾರಾಗೃಹಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಉನ್ನಾವ್ ಅತ್ಯಾಚಾರ ಪ್ರಕರಣದಲ್ಲಿ ಅಪರಾಧಿ ಬಿಜೆಪಿ ಮಾಜಿ ಶಾಸಕ ಕುಲದೀಪ್ ಸಿಂಗ್ ಸೆಂಗಾರ್ ಜೀವಾವಧಿ ಶಿಕ್ಷೆಯನ್ನು ದೆಹಲಿ ಹೈಕೋರ್ಟ್ ರದ್ದುಗೊಳಿಸಿರುವುದನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್ ಮೊರೆ ಹೋಗುವುದಾಗಿ ಸಂತ್ರಸ್ತೆ ಹೇಳಿದ್ದಾರೆ.

ಬಾಂಗ್ಲಾದೇಶದಲ್ಲಿ ಹಿಂದುಗಳ ಹತ್ಯೆ, ದಾಳಿಯನ್ನು ಖಂಡಿಸಿ ಭಾರತದಲ್ಲಿ ಪ್ರತಿಭಟನೆಗಳು ಶುರುವಾಗಿವೆ. ಇದರಿಂದ ಬೆದರಿದ ಬಾಂಗ್ಲಾ ಸರ್ಕಾರ ಭದ್ರತೆ ಕೋರಿ ಹೈಕಮಿಷನರ್‌ಗೆ ನೋಟಿಸ್ ನೀಡಿದೆ.

ಶಿವಸೇನೆ ಮತ್ತು ಮಹಾರಾಷ್ಟ್ರ ನವನಿರ್ಮಾಣ ಸೇನೆ ಮೈತ್ರಿ ಮಾಡಿಕೊಂಡು ಚುನಾವಣೆ ಎದುರಿಸುವ ನಿರ್ಧಾರ ಕಾಂಗ್ರೆಸ್ ಕೆರಳಿಸಿದೆ. ಕಾಂಗ್ರೆಸ್ ಕೂಡಾ ಏಕಾಂಗಿ ಸ್ಪರ್ಧೆ ಮಾಡುವ ಘೋಷಣೆ ಮಾಡಿದೆ.

ಮುಂಬೈ ಮಹಾನಗರ ಪಾಲಿಕೆ ಚುನಾವಣೆಗೆ ಉದ್ಧವ್ ಠಾಕ್ರೆ ಮತ್ತು ರಾಜ್ ಠಾಕ್ರೆ ಸಹೋದರರು ಮೈತ್ರಿ ಮಾಡಿಕೊಂಡ ಬಗ್ಗೆ ಇಂದು ಘೋಷಿಸಿದರು.

ಮಧ್ಯಪ್ರದೇಶದ ಖಜುರಾಹೊ ರೆಸಾರ್ಟ್‌ನಲ್ಲಿ ವಿಷ ಆಹಾರ ಸೇವಿಸಿ ಮೃತಪಟ್ಟವರ ಸಂಖ್ಯೆ ಐದಕ್ಕೆ ಏರಿಕೆಯಾಗಿದೆ.

ಭಾರತೀಯ ಪ್ರಜಾಪ್ರಭುತ್ವ ವ್ಯವಸ್ಥೆಯ ಮೇಲಿನ ದಾಳಿ ಜಾಗತಿಕ ಪ್ರಜಾಪ್ರಭುತ್ವ ವ್ಯವಸ್ಥೆಯ ಮೇಲಿನ ದಾಳಿಯಾಗಿದೆ ಎಂದು ರಾಹುಲ್ ಗಾಂಧಿ ಪ್ರತಿಪಾದಿಸಿದ್ದಾರೆ.

## ರವೆ ಲಡ್ಡು



**ಬೇಕಾಗುವ ಪದಾರ್ಥಗಳು :**
ಬಾಂಬೆ ರವೆ – 250ಗ್ರಾಂ.
ಸಕ್ಕರೆ – 250 ಗ್ರಾಂ.
ತುಪ್ಪ – ದ್ರಾಕ್ಷಿ, ಗೋಡಂಬಿ ಹುರಿಯಲು ಬೇಕಾಗುವಷ್ಟು
ಕೊಬ್ಬರಿ ತುರಿ – 50ಗ್ರಾಂ
ಒಣದ್ರಾಕ್ಷಿ – 10
ಗೋಡಂಬಿ – 10
ಕಾಯಿಸಿದ ಹಾಲು – 1 ಲೋಟ

**ಮಾಡುವ ವಿಧಾನ :** ಮೊದಲು ರವೆಯನ್ನು ಬೆರಳಿನಲ್ಲಿ ಮುಟ್ಟಿದರೆ ಸುಡುವಷ್ಟು ಹದಕ್ಕೆ ಹುರಿದುಕೊಳ್ಳಬೇಕು. ನಂತರ ಒಣದ್ರಾಕ್ಷಿ, ಗೋಡಂಬಿ ಮತ್ತು ಏಲಕ್ಕಿ ಯನ್ನು ತುಪ್ಪದಲ್ಲಿ ಹದವಾಗಿ ಹುರಿದು ಕೊಂಡು ಸಕ್ಕರೆಯನ್ನು ಒಂದೆಳೆ ಪಾಕ ಮಾಡಿ ಕೊಳ್ಳಬೇಕು, ಪಾಕಕ್ಕೆ ತುರಿದ ಕೊಬ್ಬರಿ, ದ್ರಾಕ್ಷಿ, ಗೋಡಂಬಿ ಜೊತೆಗೆ ಮೊದಲೇ ಹುರಿದು ಕೊಂಡಿರುವ ರವೆಯಲ್ಲಿ ಚೆನ್ನಾಗಿ ಬೆರಸಿ, ನಂತರ ಉಂಡೆ ಕಟ್ಟಲು ಬೇಕಾದ ಹದಕ್ಕೆ ಕಾಯಿಸಿದ ಹಾಲನ್ನು ಸ್ವಲ್ಪ, ಸ್ವಲ್ಪವಾಗಿ ಹಾಕಿಕೊಂಡು ಉಂಡೆಯನ್ನು ಕಟ್ಟಿ ಮತ್ತೊಂದು ಪಾತ್ರೆಯಲ್ಲಿ ಹಾಕಬೇಕು. ಈಗ ರವೆ ಲಡ್ಡು ಸವಿಯಲು ಸಿದ್ಧ.

## ನಮಗೆ ದೇವರ ನೆರವು ಸಿಕ್ಕಿತು : ಪಾಕಿಸ್ತಾನ




ಇಸ್ಲಮಾಬಾದ್: ಪಹಲ್ಗಾಮ್ ದಾಳಿ ನಂತರ ಭಾರತ ಉಗ್ರರ ನೆಲೆಗಳನ್ನು ಧ್ವಂಸಗೊಳಿಸಿದ ನಂತರ ನಡೆದ ಉಭಯ ದೇಶಗಳ ಮಿಲಿಟರಿ ಸಂಘರ್ಷದ ವೇಳೆಯಲ್ಲಿ ಪಾಕಿಸ್ತಾನಕ್ಕೆ ದೇವರ ನೆರವು ಸಿಕ್ಕಿತು ಎಂದು ಪಾಕಿಸ್ತಾನದ ರಕ್ಷಣಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಹೇಳಿದ್ದಾರೆ. ಇಸ್ಲಾಮಾಬಾದ್‌ನಲ್ಲಿ ಇತ್ತೀಚಿಗೆ ನಡೆದ ರಾಷ್ಟ್ರೀಯ ಉಲೇಮಾ ಸಮಾವೇಶದಲ್ಲಿ ಈ ಹೇಳಿಕೆ ನೀಡಿದ್ದಾರೆ.

## ಜೋಹಾನ್ ಬರ್ಗ್ ಅಮಾಯಕರ ಮೇಲೆ ಗುಂಡಿನ ದಾಳಿ

ಜೋಹಾನ್ಸ್‌ಬರ್ಗ್ : ಜೋಹಾನ್ಸ್‌ಬರ್ಗ್ ಹೊರವಲಯದ ಬೆಕ್ಕರ್ಸ್‌ದಾಲ್ ಗೋಲ್ಡ್ ಮೈನಿಂಗ್ ವಲಯದಲ್ಲಿ ಈ ಘಟನೆ ನಡೆದಿದೆ. ಕಾರಿನಲ್ಲಿ ಬಂದ ಬಂದುಕೂದಾರಿಗಳು ಏಕಾಏಕಿ ಅಮಾಯಕರ ಮೇಲೆ ದಾಳಿ ನಡೆಸಿದ್ದಾರೆ. ಈ ದಾಳಿಯಲ್ಲಿ 10 ಮಂದಿ ಮೃತಪಟ್ಟಿದ್ದಾರೆ. 10ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಸೌತ್‌ವೆಸ್ಟ್ ನಗರದಿಂದ 40 ಕಿಲೋಮೀಟರ್ ದೂರದಲ್ಲಿ ಈ ಘಟನೆ ನಡೆದಿದೆ. ಕಾರಿನಲ್ಲಿ ಬಂದ ಬಂದುಕೂದಾರಿಗಳು ಅಮಾಕರ ಮೇಲೆ ದಾಳಿ ಮಾಡಿದ್ದಾರೆ.



## ಗ್ರೀನ್‌ಲ್ಯಾಂಡ್ ಬಳಿ ನಿಗೂಢವಾಗಿದ್ದ ಖಂಡ ಪತ್ತೆ



ಉತ್ತರ ಅಟ್ಲಾಂಟಿಕ್ : ಉತ್ತರ ಅಟ್ಲಾಂಟಿಕ್ ಮಹಾಸಾಗರದಲ್ಲಿ ವಿಜ್ಞಾನಿಗಳು ಅಚ್ಚರಿಯ ಆವಿಷ್ಕಾರವನ್ನು ಮಾಡಿದ್ದು, ಗ್ರೀನ್‌ಲ್ಯಾಂಡ್ ಬಳಿ ನಿಗೂಢವಾಗಿದ್ದ ಸಣ್ಣ ಖಂಡವೊಂದು ಇದೀಗ ಬೆಳಕಿಗೆ ಬಂದಿದೆ. ಗ್ರೀನ್‌ಲ್ಯಾಂಡ್ ಮತ್ತು ಕೆನಡಾ ನಡುವಿನ ಜಲಸಂಧಿಯಾದ ಡೇವಿಸ್ ಜಲಸಂಧಿಯ ಬಳಿ ಈ ಸಣ್ಣ ಹೊಸ ಖಂಡ ಪತ್ತೆಯಾಗಿದೆ. ಈ ಆವಿಷ್ಕಾರವು ಭೂವಿಜ್ಞಾನಿಗಳನ್ನು ಅಚ್ಚರಿಗೊಳಿಸಿದೆ.

## ಹೊಸ ವರ್ಷಾಚಾರಣೆ ನಿಲ್ಲಿಸಿರುವ ಹಲವು ರಾಷ್ಟ್ರಗಳು !

ಟೋಕಿಯೋ: ಆಸ್ಟ್ರೇಲಿಯಾದ ಬೋಂಡಿ ಬೀಚ್ ಉಗ್ರ ದಾಳಿ ಹಿನ್ನೆಲೆ ಇದೀಗ ಜಗತ್ತಿನ ಹಲವು ದೇಶಗಳಲ್ಲಿ ಹೊಸ ವರ್ಷಾಚರಣೆಯನ್ನೇ ರದ್ದುಗೊಳಿಸುತ್ತಿದೆ. ಹೊಸ ವರ್ಷಾಚರಣೆ ವೇಳೆ ಉಗ್ರ ದಾಳಿಯ ಶಂಕೆ ವೇಳೆ ಹಲವು ದೇಶಗಳಲ್ಲಿ ಭದ್ರತೆ ಭಾರೀ ಪ್ರಮಾಣದಲ್ಲಿ ಹೆಚ್ಚಿಸಿದ್ದರೆ, ಕೆಲ ದೇಶಗಳಲ್ಲಿ ಜನತೆ ಒಂದೆಡೆ ಸೇರಿ ನಡೆಸುವ ಸಂಭ್ರಮಾಚರಣೆ ಕಾರ್ಯಕ್ರಮಗಳನ್ನೇ ರದ್ದು ಮಾಡಲಾಗಿದೆ. ಕೇವಲ ಪಟಾಕಿ ಸಿಡಿತಕ್ಕೆ ಆಚರಣೆ ಸೀಮಿತಗೊಳಿಸಲು ನಿರ್ಧರಿಸಿವೆ.




## ಉತ್ತರ ಸೌದಿಯ ತಬೂಲ್‌ನಲ್ಲಿ ಹಿಮಪಾತ




ಸೌದಿ ಅರೇಬಿಯಾ : ಸುಡುವ ಬಿಸಿಲು ಮತ್ತು ವಿಶಾಲವಾದ ಮರುಭೂಮಿಗಳಿಂದಲೇ ಗುರುತಿಸಿಕೊಳ್ಳುವ ಸೌದಿ ಅರೇಬಿಯಾದಲ್ಲಿ ಪ್ರಕೃತಿಯ ವಿಸ್ಮಯವೊಂದು ಸಂಭವಿಸಿದೆ. ಉತ್ತರ ಸೌದಿ ಅರೇಬಿಯಾದ ಪರ್ವತ ಶ್ರೇಣಿಗಳು ಈಗ ಶ್ವೇತವರ್ಣದ ಹಿಮದಿಂದ ಕಂಗೊಳಿಸುತ್ತಿದ್ದು, ಮರಳುಗಾಡು ದೃಶ್ಯವು ಸಂಪೂರ್ಣವಾಗಿ ಹಿಮಲೋಕವಾಗಿ ಮಾರ್ಪಟ್ಟಿದೆ. ತಬೂಕ್ ಪ್ರಾಂತ್ಯದ ಜಬಲ್ ಅಲ್ ಲಾವ್ಜ್ ಬೆಟ್ಟಗಳಲ್ಲಿ ಭಾರಿ ಹಿಮಪಾತವಾಗಿದ್ದು, ಇಲ್ಲಿನ ತಾಪಮಾನವು ಮೈನಸ್ ಡಿಗ್ರಿಗೆ ಕುಸಿದಿದೆ.

## ಬಾಂಗ್ಲಾದೇಶದಲ್ಲಿ ಬುಗಿಲೆದ್ದ ಭಾರತ ವಿರೋಧಿ ಚಿಂತನೆ

ಡಾಕಾ–ಬಾಂಗ್ಲಾದ ವಿದ್ಯಾರ್ಥಿ ನಾಯಕ ಷರೀಫ್ ಉಸ್ಮಾನ್ ಹದಿ ಹತ್ಯೆ ಖಂಡಿಸಿ ಬಾಂಗ್ಲಾದೇಶದಲ್ಲಿ ಭುಗಿಲೆದ್ದಿರುವ ಹಿಂಸಾತ್ಮಕ ಪ್ರತಿಭಟನೆಯನ್ನು, ಅಲ್ಲಿನ ಮೂಲಭೂತವಾದಿ ಶಕ್ತಿಗಳು ಹೈಜಾಕ್ ಮಾಡಿವೆ. ಪ್ರತಿಭಟನೆಯ ನೆಪದಲ್ಲಿ ಭಾರತ ವಿರೋಧಿ ಭಾವನೆಯನ್ನು ಅಲ್ಲಿನ ಜನರಲ್ಲಿ ಬಿತ್ತಲಾಗುತ್ತಿದ್ದು, ಭಾರತದ ಗಡಿಭಾಗಕ್ಕೆ ನುಗ್ಗುವ ಪ್ರಯತ್ನ ಕೂಡ ನಡೆದಿದೆ ಎಂದು ವರದಿಯಾಗಿದೆ. ಈ ಹಿನ್ನೆಲೆಯಲ್ಲಿ ಭಾರತೀಯ ಸೇನೆ ಗಡಿ ಭಾಗದಲ್ಲಿ ಕಟ್ಟೆಚ್ಚರವಹಿಸಿದ್ದು, ಯಾವುದೇ ಸಂಭವನೀಯ ಪರಿಸ್ಥಿತಿಯನ್ನು ಎದುರಿಸಲು ಸಜ್ಜಾಗಿದೆ.



## ಡಿಸೆಂಬರ್ 27–28ರಂದು ವಾಲಿಬಾಲ್ ಪಂದ್ಯಾವಳಿ



ಮಂಗಳೂರು: ದ.ಕ. ಜಿಲ್ಲಾಡಳಿತ, ಕ್ರೀಡಾ ಮತ್ತು ಯುವಸಬಲೀಕರಣ ಇಲಾಖೆ ಮತ್ತು ಜಿಲ್ಲಾ ವಾಲಿಬಾಲ್ ಅಸೋಸಿಯೇಷನ್ ಆಯೋಜಿಸುವ ಕರಾವಳಿ ಉತ್ಸವ 2025ರ ಅಂಗವಾಗಿ ವಾಲಿಬಾಲ್ ಪಂದ್ಯಾವಳಿ ಡಿ.27 ಮತ್ತು 28ರಂದು ಉಳ್ಳಾಲ ಬಿಚ್‌ನಲ್ಲಿ ನಡೆಯಲಿದೆ. ಡಿ.27ರಂದು 17ವರ್ಷದ ಕೆಳಗಿನ ಹುಡುಗ–ಹುಡುಗಿಯರ ಮತ್ತು 28ರಂದು ಪುರುಷ–ಮಹಿಳೆಯರ ವಾಲಿಬಾಲ್ ಪಂದ್ಯಾವಳಿ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ದೂ. ಸಂ.94810 16452 ಅಥವಾ 9481352319 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಚಾಂಪಿಯನ್ ಪಟ್ಟಕ್ಕೇರಿದ ಕೇಟ್ ತಂಡ

ಬೆಂಗಳೂರು: ಸಂಜೆಯ ಚಳಿಯ ವಾತಾವರಣದಲ್ಲಿ ಸೇರಿದ್ದ ಮೂರು ಸಾವಿರದಷ್ಟು ಪ್ರೇಕ್ಷಕರಿಗೆ, ತಾರಾ ವರ್ಚಸ್ಸಿನ ಆಟಗಾರರಿದ್ದ ವಿಶ್ವ ಟೆನಿಸ್ ಲೀಗ್ ಫೈನಲ್ ಪಂದ್ಯ ನಿರಾಸೆ ಮೂಡಿಸಲಿಲ್ಲ. ಕೈಟ್ಸ್ ತಂಡ ಹೊನಲು ಬೆಳಕಿನಡಿ ನಡೆದ ತೀವ್ರ ಹೋರಾಟದ ಪಂದ್ಯದಲ್ಲಿ 22–19ರಿಂದ ಈಗಲ್ಸ್ ತಂಡವನ್ನು ಸೋಲಿಸಿ ನಾಲ್ಕನೇ ಆವೃತ್ತಿಯ ವಿಶ್ವ ಟೆನಿಸ್ ಲೀಗ್ ಚಾಂಪಿಯನ್ ಪಟ್ಟಕ್ಕೇರಿತು.



## ಬಹುರೀಕ್ಷಿತ ಸರಣಿ ಜನವರಿ 11ರಿಂದ ಆರಂಭ



ಹೈದರಾಬಾದ್ : ಸೌತ್ ಆಫ್ರಿಕಾದೊಂದಿಗಿನ ಸರಣಿ ಬಳಿಕ ಟೀಮ್ ಇಂಡಿಯಾ ಮುಂದಿನ ಅಂತಾರಾಷ್ಟ್ರೀಯ ಸವಾಲಿಗೆ ಸಜ್ಜಾಗಿದೆ. ಭಾರತ ಮತ್ತು ನ್ಯೂಝಿಲೆಂಡ್ ನಡುವಿನ ಬಹುನಿರೀಕ್ಷಿತ ಸರಣಿ ಜ.11ರಿಂದ ಆರಂಭವಾಗಲಿದ್ದು, ಒಟ್ಟು 8 ಪಂದ್ಯಗಳು ನಡೆಯಲಿವೆ. ಈ ಸರಣಿ ಭಾರತದಲ್ಲಿ ನಡೆಯಲಿದ್ದು, ಏಕದಿನ ಹಾಗೂ ಟಿ20 ಎರಡೂ ಮಾದರಿಗಳಲ್ಲಿ ನಡೆಯಲಿದೆ. ಮೊದಲಿಗೆ 3ಪಂದ್ಯಗಳ ಏಕದಿನ ಸರಣಿ ನಡೆಯಲಿದ್ದು, ನಂತರ 5ಪಂದ್ಯಗಳ ಟಿ20 ಸರಣಿ ಆಯೋಜಿಸಲಾಗಿದೆ.

## ನಾಯಕತ್ವ ವಿಚಾರ ಸ್ಥಳೀಯ ನಾಯಕರೇ ಬಗೆಹರಿಸಿಕೊಳ್ಳಬೇಕು : ಖರ್ಗೆ



ಕಲಬುರಗಿ: ರಾಜ್ಯದಲ್ಲಿ ಸಿಎಂ ಕುರ್ಚಿ ಕದನ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದು, ನಾಯಕತ್ವ ಬದಲಾವಣೆ ಬಗ್ಗೆ ಹೈಕಮಾಂಡ್ ಯಾವುದೇ ಗೊಂದಲ ಸೃಷ್ಟಿ ಮಾಡಿಲ್ಲ. ಇದು ಸ್ಥಳೀಯ ಮಟ್ಟದಲ್ಲೇ ಇದ್ದು, ಸ್ಥಳೀಯ ನಾಯಕರೇ ಇದನ್ನ ಬಗೆಹರಿಸಿಕೊಳ್ಳಬೇಕು ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಭಾನುವಾರ ಸ್ಪಷ್ಟಪಡಿಸಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಖರ್ಗೆ, "ಹೈಕಮಾಂಡ್ ಯಾವುದೇ ಗೊಂದಲವನ್ನು ಸೃಷ್ಟಿಸಿಲ್ಲ. ಅದು ಸ್ಥಳೀಯ ಮಟ್ಟದಲ್ಲೇ ಇದೆ", ನಾಯಕತ್ವ ಬದಲಾವಣೆ ಗೊಂದಲದ ಬಗ್ಗೆ "ಹೈಕಮಾಂಡ್ ಮೇಲೆ ಆರೋಪ ಹೊರಿಸುವುದು ಎಷ್ಟು ಸರಿ?" ಎಂದರು.

## ಭಾರತ್ ಮಾತಾ ಕೀ ಜೈ ಎಂದರೆ ದ್ವೇಷ ಭಾಷಣ ಹೇಗಾಗುತ್ತದೆ– ಹೈಕೋರ್ಟ್

ಬೆಂಗಳೂರು: ಭಾರತ್ ಮಾತಾಕೀ ಜೈ ಎಂದು ಘೋಷಣೆ ಕೂಗಲು ಹೇಳಿದ್ದಕ್ಕೆ ದ್ವೇಷ ಭಾಷಣ ಎಂದು ಕೇಸ್ ಹಾಕ್ತೀರಾ? ಎಂದು ಕರ್ನಾಟಕ ಹೈಕೋರ್ಟ್ ನ್ಯಾಯಾಧೀಶರು ವಕೀಲರನ್ನು ತರಾಟೆಗೆ ತೆಗೆದುಕೊಂಡರು. ಭಾರತ್ ಮಾತಾ ಕೀ ಜೈ ಎಂದರೆ ತಪ್ಪಾಗುತ್ತಾ? ಇದಕ್ಕೆ ಕಂಪ್ಲೇಂಟ್ ಆದ್ರೂ ಹೇಗೆ ರಿಜಿಸ್ಟರ್ ಮಾಡಿದ್ರಿ?



ಎಂದು ಪ್ರಶ್ನೆ ಮಾಡುತ್ತಾರೆ. ಆಗ ವಕೀಲರು ಅವರು ಭಾರತ್ ಮಾತಾಕೀ ಜೈ ಎಂದು ಹೇಳಲು ಹೇಳಿದ್ದಷ್ಟೇ ಅಲ್ಲ, ಒತ್ತಾಯ ಮಾಡಿದರು ಎಂದು ವಿವರಣೆ ಕೊಡಲು ಹೋಗುತ್ತಾರೆ. ಆಗ ತಡೆದ ನ್ಯಾಯಾಧೀಶರು ಭಾರತ್ ಮಾತಾಕೀ ಜೈ ಎಂದು ಘೋಷಣೆ ಕೂಗಿದರೆ ಅದು ಅಪರಾಧವೇ? ಎಂದರು.

## ಐಫೋನ್ ಫ್ಯಾಕ್ಟರಿಯಲ್ಲಿ 30,000 ಉದ್ಯೋಗಿಗಳ ನೇಮಕ..!

ಬೆಂಗಳೂರು : ದೇವನಹಳ್ಳಿ ಸಮೀಪ ಫಾಕ್ಸ್‌ಕಾನ್ ಸಂಸ್ಥೆ ನಿರ್ಮಿಸಿರುವ ಐಫೋನ್ ಫ್ಯಾಕ್ಟರಿಯಲ್ಲಿ ಭಾರೀ ಪ್ರಮಾಣದಲ್ಲಿ ನೇಮಕಾತಿ ನಡೆಯುತ್ತಿದೆ. ವರದಿಗಳ ಪ್ರಕಾರ, ಕೇವಲ 8 ತಿಂಗಳಲ್ಲಿ ಬರೋಬ್ಬರಿ 30,000 ಉದ್ಯೋಗಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆ. ಭಾರತದಲ್ಲಿ ಯಾವುದೇ ಸಂಸ್ಥೆಯು ಅಥವಾ ಯಾವುದೇ ಫ್ಯಾಕ್ಟರಿಯೂ ಇಷ್ಟು ವೇಗದಲ್ಲಿ ಇಷ್ಟು ಪ್ರಮಾಣದಲ್ಲಿ ನೇಮಕಾತಿ ಮಾಡಿಕೊಂಡಿದ್ದೇ ಇಲ್ಲ. 300 ಎಕರೆ ಜಾಗದಲ್ಲಿ ತೈವಾನ್ ಮೂಲದ ಫಾಕ್ಸ್‌ಕಾನ್ ಕಂಪನಿ ಫ್ಯಾಕ್ಟರಿಯಲ್ಲಿ ನೇಮಕವಾಗಿರವವರಲ್ಲಿ ಶೇ. 80ರಷ್ಟು ಮಂದಿ ಮಹಿಳೆಯರೇ. ಎಲ್ಲರೂ ಎಂಟ್ರಿ ಏಜ್ ಲೆವೆಲ್‌ನಲ್ಲಿದ್ದಾರೆ ಎಂಬುದು ವಿಶೇಷವಾಗಿದೆ.



## ವೋಟ್ ಚೋರಿ ವಿರುದ್ಧದ ಹೋರಾಟದಲ್ಲಿ 'ಚಿಲುಮೆ' ಅಸ್ತ್ರ

ಬೆಂಗಳೂರು : ವೋಟ್ ಚೋರಿ ವಿರುದ್ಧದ ಹೋರಾಟ ಮತ್ತಷ್ಟು ತೀವ್ರಗೊಳಿಸಲು ಮುಂದಾಗಿರುವ ರಾಜ್ಯ ಸರ್ಕಾರ, ಬಿಜೆಪಿ ವಿರುದ್ಧ 'ಚಿಲುಮೆ' ಅಸ್ತ್ರ ಪ್ರಯೋಗಿಸಲು ಸಜ್ಜಾಗಿದೆ. 2023ರಲ್ಲಿ ವಿಧಾನಸಭಾ ಚುನಾವಣೆ ಪೂರ್ವ ತಯಾರಿ ಹೊತ್ತಿನಲ್ಲಿ ಬೆಂಗಳೂರಿನ ನಾಲ್ಕು ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಮಾಹಿತಿ ಕಾನೂನು ಬಾಹಿರವಾಗಿ ಸಂಗ್ರಹಿಸಿದ ಆರೋಪಕ್ಕೆ ಖಾಸಗಿ ಸಂಸ್ಥೆಯಾದ ಚಿಲುಮೆ ಗುರಿಯಾಗಿತ್ತು. ಸಂಸ್ಥೆಗೆ ಬೆಂಗಳೂರಿನ 'ಪ್ರಭಾವಿ' ಬಿಜೆಪಿ ನಾಯಕರ ಜತೆ ನಂಟಿದೆ ಎಂಬ ಆಪಾದನೆಯೂ ಕೇಳಿ ಬಂದಿತ್ತು. ಆದರೆ ಈ ಸಂಸ್ಥೆ ವಿರುದ್ಧ ದಾಖಲಾದ ಎರಡು ಎಫ್‌ಐಆರ್‌ಗಳ ತನಿಖೆಗೆ ಹೈಕೋರ್ಟ್ ತಡೆಯಾಜ್ಞೆ ನೀಡಿತ್ತು.




## ಲೀಟರ್ ಹಾಲಿಗೆ 2 ರೂ. ಪ್ರೋತ್ಸಾಹಧನ



ಬೆಂಗಳೂರು : ರೈತರಿಗೆ 1 ಲೀಟರ್ ಹಾಲಿಗೆ ಸಹಾಯಧನವನ್ನು 7 ರೂಪಾಯಿಗೆ ಏರಿಕೆ ಮಾಡುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಇಂದು ಬೆಳಗಾವಿ ಅಧಿವೇಶನದ ಕೊನೆಯ ದಿನ ಮಾತನಾಡಿದ ಅವರು ರೈತರಿಗೆ ಹಸುಗಳನ್ನು ಸಾಕಿ ಮೇವು ನೀಡಲು ಹೆಚ್ಚು ಖರ್ಚುಗಳು ಆಗುತ್ತವೆ. ಮೇವು ಸಾಕಾಣಿಕೆಗೆ ರೈತರಿಗೆ ನೆರವಾಗಲು, ಮೇವಿನ ಹಿಂಡಿ ದರ ಹೆಚ್ಚಳವಾಗಿರುವ ಹಿನ್ನೆಲೆಯಲ್ಲಿ ನಮ್ಮ ಸರ್ಕಾರ ಪ್ರತಿಲೀಟರ್ ಹಾಲಿನ ಮೇಲೆ 5 ರೂಪಾಯಿ ಸಹಾಯಧನವನ್ನು ಹಿಂದೆ ನೀಡಲಾಗುತ್ತಿತ್ತು. ಅದನ್ನೀಗ ಈ ವರ್ಷದ ಅವಧಿಯಲ್ಲೇ 7 ರೂಪಾಯಿಗೆ ಹೆಚ್ಚಿಸುತ್ತಿದ್ದೇವೆ ಎಂದರು.

## 261 ಕೋಟಿ ಪರಿಹಾರ ಜಮೆ ಮಾಡಲಾಗಿದೆ – ಖಂಡ್ರೆ

ಬೀದರ್: ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಬೆಳೆ ಹಾನಿಗೀಡಾದ 1,86,426 ರೈತರ ಖಾತೆಗಳಿಗೆ 17 ಹಂತಗಳಲ್ಲಿ ಒಟ್ಟು 261.43 ಕೋಟಿ ಪರಿಹಾರ ಜಮೆ ಮಾಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದರು. ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಪ್ರವಾಹದಿಂದ ಬೆಳೆ ಹಾನಿಯಾದ ರೈತರಿಗೆ ಎನ್‌ಡಿಆರ್‌ಎಫ್ ಹಾಗೂ ಎಸ್‌ಡಿಆರ್‌ಎಫ್‌ನಿಂದ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಪರಿಹಾರ ವಿತರಿಸಲಾಗಿದೆ ಎಂದು ಹೇಳಿದರು. 8,615 ಜನರಿಗೆ ತಾಂತ್ರಿಕ ಕಾರಣದಿಂದ ಪರಿಹಾರ ಇನ್ನೂ ಬರಬೇಕಿದೆ. ಪರಿಹಾರ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.



## ಕಾಂಗ್ರೆಸ್ ಸೋತಾಗ ಆರೋಪದ ಮೇಲೆ ಆರೋಪ!

ಮುಂಬೈ : ಕೇರಳದಲ್ಲಿ ಇತ್ತೀಚೆಗೆ ನಡೆದ ಸ್ಥಳೀಯ ಸಂಸ್ಥೆ ಚುನಾಣೆಯಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಕ್ಲೀನ್ ಸ್ವೀಪ್ ಗೆಲುವು ಸಾಧಿಸಿತ್ತು. ಆಡಳಿತರೂಢ ಕಮ್ಯೂನಿಸ್ಟ್ ನೇತೃತ್ವದ ಎಲ್‌ಡಿಎಫ್ ಸೋತಿತ್ತು. ಈ ವೇಳೆ ಕಾಂಗ್ರೆಸ್ ಇದು ಪ್ರಜಾಪ್ರಭುತ್ವದ ಗೆಲುವು ಎಂದಿದ್ದರು. ಆದರೆ ಇದೇ ಕಾಂಗ್ರೆಸ್ ನೇತೃತ್ವದ ಮಹಾ ವಿಕಾಸ್ ಅಘಾಡಿ ಮಹಾರಾಷ್ಟ್ರದ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಸೋತಿದೆ. ಇದರ ಬೆನ್ನಲ್ಲೇ ಕಾಂಗ್ರೆಸ್, ಉದ್ಧವ್ ಠಾಕ್ರೆ ಬಣದ ಶಿವಸೇನೆ ಹಾಗೂ ಎನ್‌ಸಿಪಿ ನಾಯಕರು ಇದು ಇವಿಎಂ ಅಕ್ರಮ, ಚುನಾವಣಾ ಆಯೋಗ ಕೃಪೆ ಹಾಗೂ ಹಣಬಲದಿಂದ ಗೆಲುವು ಸಾಧಿಸಿದೆ ಎಂದು ಆರೋಪಿಸಿದೆ.



## ಸಮಸ್ಯೆ ಬಗೆಹರಿಸಲು ಹೈಕಮಾಂಡ್‌ಗೆ ಏಕೆ ಸಾಧ್ಯವಾಗುತ್ತಿಲ್ಲ –ಜೋಶಿ

ಬೆಂಗಳೂರು: ರಾಜ್ಯ ಸರ್ಕಾರದಲ್ಲಿ ಉದ್ಭವಿಸಿರುವ ಮುಖ್ಯಮಂತ್ರಿ ಕುರ್ಚಿ ಗೊಂದಲದ ಸಮಸ್ಯೆ ಬಗೆ ಹರಿಸಲು ಕಾಂಗ್ರೆಸ್ ಹೈಕಮಾಂಡ್‌ಗೆ ಏಕೆ ಸಾಧ್ಯವಾಗುತ್ತಿಲ್ಲ ಎಂಬ ಪ್ರಶ್ನೆ ಮೂಡಿದೆ. ಪವರ್ ಶೇರಿಂಗ್ ಗೊಂದಲದಿಂದಾಗಿ ಇಡೀ ರಾಜ್ಯದಲ್ಲಿ ಅಸ್ಥಿರತೆ, ಅರಾಜಕತೆ ನಿರ್ಮಾಣವಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು. ಜನರು ಐದು ವರ್ಷ ಆಡಳಿತ ಮಾಡಬೇಕು ಎಂದು ಕಾಂಗ್ರೆಸ್‌ನವರಿಗೆ ಅಧಿಕಾರ ಕೊಟ್ಟಿದ್ದಾರೆ. ನಾವು ಅದನ್ನು ಯಶಸ್ವಿಯಾಗಿ ನಡೆಸುತ್ತಿದ್ದೇವೆ. ರಾಜ್ಯ ಸರ್ಕಾರ ತನ್ನ ಕೆಲಸ ವನ್ನು ಸರಿಯಾಗಿ ಮಾಡಬೇಕು. ಇಲ್ಲದಿದ್ದರೆ ಜನ ಸೂಕ್ತ ಪಾಠ ಕಲಿಸಲಿದ್ದಾರೆ ಎಂದರು.



## ನಖಾಬ್ ವಿಷಯ ಬೇಸರ ತಂದಿದೆ–ಆರಿಫ್ ಮೊಹಮ್ಮದ್ ಖಾನ್



ಪಟ್ನಾ: ಕಾರ್ಯಕ್ರಮವೊಂದರಲ್ಲಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ವೈದ್ಯೆಯೊಬ್ಬರ ನಖಾಬ್ (ಮುಖಗವುಸು) ತೆಗೆದಿದ್ದನ್ನು ವಿವಾದವಾಗಿ ನೋಡುತ್ತಿರುವುದು ನನಗೆ ಬೇಸರ ತಂದಿದೆ ಎಂದು ಬಿಹಾರ ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್ ಹೇಳಿದ್ದಾರೆ. ಈ ಘಟನೆಯಲ್ಲಿ ವಿವಾದ ಎನ್ನುವ ಪದ ಕೇಳುವುದು ನನಗೆ ನೋವುಂಟು ಮಾಡಿದೆ. ತಂದೆ ಮತ್ತು ಮಗಳ ಮಧ್ಯೆ ವಿವಾದ ಇರಲು ಸಾಧ್ಯವೇ? ನೀವು ಇದನ್ನು ಆ ರೀತಿ ಬಿಂಬಿಸುತ್ತಿದ್ದೀರಿ. ಆ ಮನುಷ್ಯ (ಮುಖ್ಯಮಂತ್ರಿ) ವಿದ್ಯಾರ್ಥಿನಿಯರನ್ನು ತನ್ನ ಹೆಣ್ಣು ಮಕ್ಕಳಂತೆ ಕಾಣುತ್ತಾರೆ' ಎಂದು ರಾಜ್ಯಪಾಲರು ಪತ್ರಕರ್ತರಿಗೆ ಪ್ರತಿಕ್ರಿಯಿಸಿದರು.


## ಜಗತ್ತು ಬದಲಾವಣೆಗಳಿಗೆ ಒಳಗಾಗುತ್ತಿದೆ : ಜೈ ಶಂಕರ್

ನವದೆಹಲಿ: ಜಗತ್ತೆ ಪ್ರಸ್ತುತ ಪ್ರಮುಖ ಜಾಗತಿಕ ಆರ್ಥಿಕ ಮತ್ತು ರಾಜಕೀಯ ಬದಲಾವಣೆಗಳಿಗೆ ಒಳಗಾಗುತ್ತಿದೆ ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಹೇಳಿದರು. ಪರಿಣಾಮವಾಗಿ ಬಹು ಅಧಿಕಾರ ಕೇಂದ್ರಗಳು ಹೊರಹೊಮ್ಮುತ್ತಿವೆ ಎಂದು ಪುಣೆಯಲ್ಲಿ ಸಿಂಬಿಯೋಸಿಸ್ ಅಂತರರಾಷ್ಟ್ರೀಯ ವಿಶ್ವವಿದ್ಯಾಲಯದ 22ನೇ ಘಟಿಕೋತ್ಸವವನ್ನುದ್ದೇಶಿಸಿ ಮಾತನಾಡಿದ ಜೈಶಂಕರ್ ಒಂದು ದೇಶ ಎಷ್ಟೇ ಶಕ್ತಿಶಾಲಿಯಾಗಿದ್ದರೂ, ಯಾವುದೇ ವಿಷಯದ ಬಗ್ಗೆ ಅದು ಇನ್ನು ಮುಂದೆ ತನ್ನ ಇಚ್ಛೆಯನ್ನು ಇತರರ ಮೇಲೆ ಹೇರಲು ಸಾಧ್ಯವಿಲ್ಲ. ಜಾಗತಿಕ ಆರ್ಥಿಕ ಮತ್ತು ರಾಜಕೀಯ ಶಕ್ತಿ ಶ್ರೇಣಿ ಸಂಪೂರ್ಣವಾಗಿ ಬದಲಾಗಿದೆ ಎಂದು ಹೇಳಿದರು.



## ಮಲ್ಯ ಭಾರತಕ್ಕೆ ಮರಳುವಂತೆ ಬಾಂಬೆ ಹೈಕೋರ್ಟ್ ಸೂಚನೆ

ಮಹಾರಾಷ್ಟ್ರ: ದೇಶಭ್ರಷ್ಟ ಆರ್ಥಿಕ ಅಪರಾಧಿ ಎಂಬ ಹಣೆಪಟ್ಟಿ ಕಟ್ಟಿಕೊಂಡಿರುವ ವಿಜಯ್ ಮಲ್ಯ ಅವರ ವಕೀಲರಿಗೆ ಬಾಂಬೆಹೈಕೋರ್ಟ್ ಹಿಂದಿನ ಸೂಚನೆಯನ್ನು ಪುನರುಚ್ಚರಿಸಿದೆ. ಮಲ್ಯ ಅವರು ಭಾರತಕ್ಕೆ ಮರಳಬೇಕು ಮತ್ತು ಅವರು ಬಂದ ಮರುದಿನದಿಂದಲೇ ಅವರ ಅರ್ಜಿಯ ವಿಚಾರಣೆಯನ್ನು ಪ್ರಾರಂಭಿಸಲಾಗುವುದು ಎಂದು ನ್ಯಾಯಾಲಯ ಹೇಳಿದೆ. ಮುಖ್ಯ ನ್ಯಾಯಮೂರ್ತಿ ಶ್ರೀ ಚಂದ್ರಶೇಖರ್ ಮತ್ತು ನ್ಯಾಯಮೂರ್ತಿ ಗೌತಮ್ ಅಂಕಂಡ್ ಅವರನ್ನೊಳಗೊಂಡ ಬಾಂಬೆ ಹೈಕೋರ್ಟ್ ಪೀಠವು ಅರ್ಜಿ ವಿಚಾರಣೆ ನಡೆಸಿತು.



## ಲವ್ ಜಿಹಾದ್ : ಅನ್ಯಕೋಮಿನ ವೈದ್ಯ ಅಮಾನತು

ಉತ್ತರಪ್ರದೇಶ:ಇಲ್ಲಿನ ಕಿಂಗ್ ಜಾರ್ಜ್ ವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ (ಕೆಜಿಎಂಯು) ಲವ್ ಜಿಹಾದ್ ಮತ್ತು ಮತಾಂತರಕ್ಕೆ ಕಿರುಕುಳ ನೀಡಿದ ಪ್ರಕರಣ ಬೆಳಕಿಗೆ ಬಂದಿದ್ದು ಹಿಂದು ವೈದ್ಯೆಯನ್ನು ಪುಸಲಾಯಿಸಿ ಮತಾಂ ತರಕ್ಕೆ ಒತ್ತಾಯಿಸಿದ ಆರೋಪದ ಮೇಲೆ ಅನ್ಯಕೋಮಿನ ವೈದ್ಯನನ್ನು ಸೇವೆಯಿಂದ ಅಮಾನತು ಮಾಡಿ ಸಿಎಂ ಯೋಗಿ ಆದಿತ್ಯನಾಥ್ ಸರ್ಕಾರ ಆದೇಶಿಸಿದೆ. ಡಾ.ರಮೀಜುದ್ದೀನ್ ಮಲಿಕ್ ಸೇವೆಯಿಂದ ಅಮಾನತಾದ ವೈದ್ಯ ಮೊದಲ ಮದುವೆಯನ್ನು ಮರೆಮಾಡಿ ಹಿಂದು ಮಹಿಳಾ ವೈದ್ಯೆಯೊಂದಿಗೆ ಪ್ರೇಮ ಸಂಬಂಧ ಹೊಂದಿದ್ದು ಆಕೆಯನ್ನು ಇಸ್ಲಾಂಗೆ ಮತಾಂತರಗೊಳ್ಳುವಂತೆ ಒತ್ತಡ ಹೇರಿದ್ದ ಎನ್ನುವ ಆರೋಪದ ಮೇಲೆ ಅಮಾನಾತು ಮಾಡಲಾಗಿದೆ.






## ಡಿಸೆಂಬರ್ 25ರಂದು ಬಿಡುಗಡೆಯಾಗುತ್ತಿದೆ '45' ಚಿತ್ರ

ಕರುನಾಡ ಚಕ್ರವರ್ತಿ ಶಿವರಾಜಕುಮಾರ್, ರಿಯಲ್ ಸ್ಟಾರ್ ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಪ್ರಮುಖಪಾತ್ರದಲ್ಲಿ ನಟಿಸಿರುವ, ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಚೊಚ್ಚಲ ನಿರ್ದೇಶನದ ಹಾಗೂ ಎಂ. ರಮೇಶ್ ರೆಡ್ಡಿ ಅವರು ತಮ್ಮ ಸೂರಜ್ ಪ್ರೊಡಕ್ಷನ್ ಬ್ಯಾನರ್‌ನಲ್ಲಿ ನಿರ್ಮಿಸಿರುವ ಕನ್ನಡದ ಬಹು ನಿರೀಕ್ಷಿತ ಮಲ್ಟಿಸ್ಟಾರರ್ "45" ಚಿತ್ರ ಇದೇ ಡಿಸೆಂಬರ್ 25ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಇತ್ತೀಚೆಗಷ್ಟೇ ಚಿತ್ರದ ಟ್ರೇಲರ್ ಸಹ ಬಿಡುಗಡೆಯಾಗಿದ್ದು, ನಿರೀಕ್ಷೆಗೂ ಮೀರಿ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಈ ಖುಷಿಯನ್ನು ಹಂಚಿಕೊಳ್ಳಲು ಆಯೋಜಿಸಲಾಗಿದ್ದ ಪತ್ರಿಕಾ ಗೋಷ್ಠಿಯಲ್ಲಿ ಚಿತ್ರತಂಡದ ಸದಸ್ಯರು ಮಾತನಾಡಿದರು. ಇತ್ತೀಚೆಗಷ್ಟೇ ನಮ್ಮ ಚಿತ್ರದ ಟ್ರೇಲರ್ ಕನ್ನಡ ಸೇರಿದಂತೆ ಐದು ಭಾಷೆಗಳಲ್ಲಿ ಬಿಡುಗಡೆಯಾಗಿದ್ದು, ಎಲ್ಲಾ ಕಡೆಗಳಿಂದಲೂ ಅಪಾರ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಹಾಡುಗಳಿಗೂ ಜನರು ಮನ ಸೋತಿದ್ದಾರೆ. ನಮ್ಮ ಚಿತ್ರಕ್ಕೆ ಆರಂಭದಿಂದಲೂ ಪ್ರೋತ್ಸಾಹ ನೀಡುತ್ತಾ ಬಂದಿರುವ ಎಲ್ಲರಿಗೂ ಧನ್ಯವಾದ. ನಾನು ಸಿನಿಮಾ ನೋಡಿದ್ದೇನೆ. ನಿರ್ಮಾಪಕನಾಗಿ ನನಗೆ ಬಹಳ ಸಂತೋಷವಾಗಿದೆ. ನಮ್ಮ ಚಿತ್ರ ಎಲ್ಲರಿಗೂ ಮೆಚ್ಚುಗೆಯಾಗಲಿದೆ. ಚಿತ್ರ ಬಿಡುಗಡೆಯಾಗುತ್ತಿರುವ ಈ ಸಮಯದಲ್ಲಿ ಉತ್ತಮವಾಗಿ ಮೂಡಿಬರಲು ಸಹಕಾರ ನೀಡಿದ್ದ ಪ್ರತಿಯೊಬ್ಬರಿಗೂ ನನ್ನ ಧನ್ಯವಾದ. ಶಿವರಾಜಕುಮಾರ್ ಅವರಿಗೆ ವಿಶೇಷ ಧನ್ಯವಾದ ಹೇಳಬೇಕು. ಅವರಿಗೆ ಆರೋಗ್ಯದ ಸಮಸ್ಯೆ ಇದ್ದರೂ ಚಿತ್ರಕ್ಕೆ ತೊಂದರೆ ಆಗಬಾರದೆಂದು ತಮ್ಮ ಕೆಲಸಗಳನ್ನು ಪೂರೈಸಿ ಚಿಕಿತ್ಸೆಗಾಗಿ ವಿದೇಶಕ್ಕೆ ತೆರಳಿದರು. ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಅವರ ಸಹಕಾರ ಕೂಡ ಅಪಾರ. ಅರ್ಜುನ್ ಜನ್ಯ ಮೂರು ವರ್ಷಗಳಿಂದ ನಮ್ಮ ಚಿತ್ರಕ್ಕಾಗಿ ಪಟ್ಟಿರುವ ಶ್ರಮ ಅಷ್ಟಿಷ್ಟಲ್ಲ. ಅವರ ಶ್ರಮ ಸಾರ್ಥಕ ಆಗಿದೆ.



ಇನ್ನೂ, ನಮ್ಮ ಚಿತ್ರವನ್ನು ಕರ್ನಾಟಕದಲ್ಲಿ ಕೆ.ವಿ.ಎನ್ ಸಂಸ್ಥೆ ವಿತರಣೆ ಮಾಡುತ್ತಿದೆ. ತಮಿಳುನಾಡು, ಆಂದ್ರಪ್ರದೇಶ ಹಾಗೂ ಕೇರಳದಲ್ಲೂ ಜನಪ್ರಿಯ ಸಂಸ್ಥೆಗಳು ವಿತರಣೆ ಮಾಡುತ್ತಿದೆ.

## ಧರ್ಮ ಕೀರ್ತಿರಾಜ್ 25ನೇ ಚಿತ್ರ ನಯನ ಮನೋಹರ

ಚಿತ್ರರಂಗದ ಚಾಕೋಲೇಟ್ ಬಾಯ್ ಧರ್ಮಕೀರ್ತಿರಾಜ್ ನಾಯಕತ್ವದ 25ನೇ ಚಿತ್ರ 'ನಯನ ಮನೋಹರ' ಸಿನಿಮಾದ ಶೀರ್ಷಿಕೆ ಅನಾವರಣ ಮತ್ತು ಟೀಸರ್ ಬಿಡುಗಡೆ ಕಾರ್ಯಕ್ರಮವು ಯುಬಿ ಸಿಟಿಯ ಮ್ಯಾರಿಯಟ್ ಅಪಾರ್ಟ್‌ಮೆಂಟ್ಸ್‌ದಲ್ಲಿ ಅದ್ದೂರಿಯಾಗಿ ನಡೆಯಿತು. ಬೆಂಗಳೂರು ಮೂಲದ ಯುವ ಉದ್ಯಮಿ, ಬಿಲ್ಡರ್ ಅನುಷ್ ಸಿದ್ದಪ್ಪ ಕನ್ನಡ ಚಿತ್ರರಂಗಕ್ಕೆ ಏನಾದರೂ ಕೊಡುಗೆ ಕೊಡಬೇಕೆಂಬ ಅಭಿಲಾಷೆಯಿಂದ 'ನಯನ ಮನೋಹರ' ಚಿತ್ರವನ್ನು ತಮ್ಮದೇ ಎಕ್ಸಿಟ್ ಎಂಟರ್‌ಟೈನ್‌ಮೆಂಟ್ಸ್ (EXQUISITE Entertainments) ಬ್ಯಾನರ್ ಅಡಿಯಲ್ಲಿ ನಿರ್ಮಾಣ ಮಾಡುತ್ತಿದ್ದಾರೆ. ಯುವ ಪ್ರತಿಭೆ ನಿರ್ದೇಶಕ ಪುನೀತ್.ಕೆಜಿಆರ್ ಚೊಚ್ಚಲ ಚಿತ್ರಕ್ಕೆ ತಮ್ಮದೇ 'ಲಾಸ್ಟ್ ಬೆಂಚ್ ವಂಡರ್ಸ್ ಸಿನ್ಸ್ 1990' ತಂಡದೊಂದಿಗೆ ನಿರ್ದೇಶನ ಮಾಡುತ್ತಿದ್ದು, 'ಇದು ನಿಮ್ಮನ್ನು ನಿಮಗೆ ಪರಿಚಯಿಸುವ ಸುಂದರ ಕಾವ್ಯ' ಎಂಬ ಅರ್ಥಪೂರ್ಣ ಅಡಿಬರಹ ವಿಶೇಷವಾಗಿತ್ತು. ಅಪ್ಪ, ಅಮ್ಮ, ಅಕ್ಕ ಬಂದಿರುವುದು ನನಗೆ ಶಕ್ತಿ ಬಂದಿದೆ. ಎಲ್ಲರೂ ಸಮಯ ಬಿಡುವು ಮಾಡಿಕೊಂಡು ತಂಡಕ್ಕೆ ಹರಸಲು ಆಗಮಿಸಿದಕ್ಕೆ ತುಂಬಾ ಥ್ಯಾಂಕ್ಸ್. 25ನೇ ಫಿಲಂ ಮೈಲ್ ಸ್ಟೋನ್ ಅಂತ ಹೇಳಬಹುದು. ಮೇಜರ್ ಹೀರೋ ಅಂದರೆ ನಿರ್ಮಾಪಕರು. ನಿರ್ದೇಶಕರು ಕಥೆ ಹೇಳಿದಾಗ ಬಹಳ ಖುಷಿ ಆಯಿತು. ಮೂರು ಶೇಡ್‌ಗಳಲ್ಲಿ ಕಾಣಿಸಿಕೊಳ್ಳುತ್ತೇನೆ. ವಾಸುಕಿ ವೈಭವ್ ಸಂಗೀತ ಚಿತ್ರಕ್ಕೆ ಪ್ಲಸ್ ಆಗಿದೆ. ಪ್ರಿಯಾಂಕ ಮೇಡಂ ಜತೆಗೆ 'ವೈರಸ್'ದಲ್ಲಿ ನಟಿಸಿದ್ದೇನೆ. ಅವರು ತುಂಬಾ ಸರಳವ್ಯಕ್ತಿ. ಗೆಳೆಯ ವಿನೋದ್ ಪ್ರಭಾಕರ್ ಮೊದಲಿಂದಲೂ ಸಪೋರ್ಟ್ ಮಾಡುತ್ತಾ ಬಂದಿದ್ದಾರೆ. ಏನೇ ತಪ್ಪು ಮಾಡಿದರೂ, ಮನೆಗೆ ಕರೆಸಿಕೊಂಡು ಬುದ್ದಿವಾದ ಹೇಳುತ್ತಾರೆ. ಇದು ನನಗೆ ಹೆಸರು ತಂದುಕೊಡುತ್ತದೆಂಬ ನಂಬಿಕೆ ಇದೆ ಅಂತ ಧರ್ಮಕೀರ್ತಿರಾಜ್ ಎಲ್ಲರಿಗೂ ಥ್ಯಾಂಕ್ಸ್ ಎನ್ನುತ್ತಾ ಮೈಕ್‌ನ್ನು ಹಸ್ತಾಂತರಿಸಿದರು.



## ಮನಸು ಕದಡುವ ಪ್ರಣಯ ಪಯಣ ವಿಡಿಯೋ ಗೀತೆ

'ಲೈಫ್ 360' ಚಿತ್ರದ ನಾಯಕ ಅಲ್ಲದೆ ನಿರ್ದೇಶನ ಮಾಡಿದ್ದ ಅರ್ಜುನ್ ಕಿಶೋರ್ ಚಂದ್ರ, ಮುಂದೆ ಉದ್ಯೋಗ ಅರಸಿ ವಿದೇಶಕ್ಕೆ ಹಾರಿದ್ದರು. ಅಲ್ಲಿದ್ದರೂ ಮನಸ್ಸು ಮಾತ್ರ ಬಣ್ಣದ ಲೋಕದ ಕಡೆ ಸೆಳೆಯುತ್ತಲೇ ಇತ್ತು. ಬಿಡುವಿನ ವೇಳೆಯಲ್ಲಿ ಏನಾದರೂ ಮಾಡುತ್ತಿದ್ದರು. ಅದರ ಪ್ರತಿಫಲವೇ 'ಪ್ರಣಯ ಪಯಣ' ಎಂಬ ಐದು ನಿಮಿಷದ ವಿಡಿಯೋ ಗೀತೆಗೆ ಕಥೆ,ಸಾಹಿತ್ಯ ಬರೆದು ಆಕ್ಷನ್ ಕಟ್ ಹೇಳಿ ಮುಖ್ಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಪ್ರಾರಂಭದಿಂದಲೂ ಇವರ ಶ್ರಮಕ್ಕೆ ಆಸರೆಯಾಗಿರುವ ಹಿರಿಯ ಉದ್ಯಮಿ ಬೆಂಗಳೂರಿನ ರಾಜಶೇಖರ್.ಎಸ್ ಅವರು ಶ್ರೀ ಸಾಯಿ ಗಗನ್ ಪ್ರೊಡಕ್ಷನ್ಸ್ ಅಡಿಯಲ್ಲಿ ಬಂಡವಾಳ ಹೂಡಿದ್ದಾರೆ. 'ಪ್ರೀತಿಯಲ್ಲಿ ಪಯಣ' ಎಂಬ ಅಡಿಬರಹ ಇಂಗ್ಲೀಷ್‌ದಲ್ಲಿ ಇರಲಿದೆ. ಮೊನ್ನೆಯಷ್ಟೇ ಹಾಡನ್ನು ವೀಕ್ಷಿಸಿದ ಅಶ್ವಿನಿ ಪುನೀತ್‌ರಾಜ್‌ಕುಮಾರ್ ಮನಸೋತು ತಮ್ಮದೆ ಪಿಆರ್‌ಕೆ ಆಡಿಯೋ ಕಂಪೆನಿಯಿಂದ ಬಿಡುಗಡೆ ಮಾಡಲು ನಿರ್ಧರಿಸಿ, ನಿರ್ದೇಶಕ ಮತ್ತು ನಿರ್ಮಾಪಕರನ್ನು ಕಛೇರಿಗೆ ಕರೆಸಿಕೊಂಡು ಶ್ಲಾಘಿಸಿದ್ದಾರೆ. ಇನ್ನು ಹಾಡಿನ ಕುರಿತು ಹೇಳುವುದಾದರೆ, ಅಂದರು ವಾಸನೆಯನ್ನು ಹೇಗೆ ಗ್ರಹಿಸುತ್ತಾರೆ, ಸ್ಪರ್ಶವನ್ನು ಯಾವ ರೀತಿ ಅನುಭವಿಸುತ್ತಾರೆ ಎನ್ನುವ ಕುತೂಹಲ ಇತ್ತು. ಇದನ್ನು ತಿಳಿಸುವ ಸಲುವಾಗಿ ಗೀತೆ ಮಾಡಲಾಗಿದೆ ಅಂತ ನಿರ್ದೇಶಕರು ವ್ಯಾಖ್ಯಾನ ನೀಡುತ್ತಾರೆ. ದೈಹಿಕ ನ್ಯೂನತೆ ಏನೇ ಇದ್ದರೂ, ಜೀವನದಲ್ಲಿ ಕನಸನ್ನು ಇಟ್ಟುಕೊಂಡವನು, ಚಿಂತಿಸದೆ ಅದರ ಬೆನ್ನು ಹತ್ತಿ ಹೇಗೆ ಸಾಧಿಸುತ್ತಾರೆ ಎಂಬುದನ್ನು ಹೇಳಲಿದ್ದಾರೆ. ಜತೆಗೆ ಐರ್ಲೆಂಡ್ ದೇಶ ಎಷ್ಟು ಚೆನ್ನಾಗಿದೆ ಎಂದು ತಿಳಿಸಲು ಅಲ್ಲಿನ ಸುಂದರ ತಾಣಗಳಲ್ಲಿ ದೃಶ್ಯಗಳನ್ನು ಸೆರೆ ಹಿಡಿದಿದ್ದಾರೆ. ರಂಗಭೂಮಿ ನಟಿ ಎಡೆಲ್ ಆಶ್ಲಿಂಗ್ ನಾಯಕಿ.



## ಸುಖೀಭವ ಚಿತ್ರದ ಹಾಡಿಗೆ ಶರಣ್ ಧ್ವನಿ

ಮನಸ್ಸನ್ನು ಖುಷಿ ಪಡಿಸುವ ಶೀರ್ಷಿಕೆ ಸುಖೀಭವ ಚಿತ್ರಕ್ಕೆ ದಂಪತಿಗಳಾದ ಸಂತೋಷ್ ಕುಮಾರ್-ಭಾರ್ಗವಿ ಸಂತೋಷ್ ನಿರ್ಮಾಪಕರು. ಇವರಿಗೆ ರಾಬರ್ಟ್ ನಿರ್ಮಾಪಕ ಉಮಾಪತಿ ಶ್ರೀನಿವಾಸಗೌಡ ಸ್ನೇಹಿತರು. ಗೆಳೆಯನ ಸ್ಪೂರ್ತಿ ಹಾಗೂ ಹಿತೈಷಿಯಾಗಿದ್ದರಿಂದಲೇ ಧೈರ್ಯ ಮಾಡಿ ಪುತ್ರರ ಹೆಸರುಗಳಾದ ವೇದ್ ಆರ್ಯನ್ ಫಿಲಂಸ್ ಬ್ಯಾನರ್ ಅಡಿಯಲ್ಲಿ ಬಂಡವಾಳ ಹೂಡಿದ್ದಾರೆ. ಇವರ ತಾತಾ 80ರ ದಶಕದಲ್ಲಿ ತೆಲುಗು ಚಿತ್ರಗಳನ್ನು ನಿರ್ಮಾಣ ಮಾಡಿದ್ದರು. ಅದೇ ವಂಶದ ಕುಡಿಯಾಗಿರುವ ಸಂತೋಷ್‌ಕುಮಾರ್ ಲಂಡನ್‌ನಲ್ಲಿ ಶಿಕ್ಷಣ ಮುಗಿಸಿ, ನಂತರ ಭಾಷೆಯ ಮೇಲಿನ ಅಭಿಮಾನದಿಂದ ಕನ್ನಡ ಸಿನಿಮಾಕ್ಕೆ ಹಣ ಹಾಕಿದ್ದಾರೆ. ವಿಕಟಕವಿ, ನಿರ್ದೇಶಕ ಯೋಗರಾಜ್ ಭಟ್ ಸೇರಿದಂತೆ ಅನೇಕರ ಬಳಿ ಸಹಾಯಕರಾಗಿ ಗುರುತಿಸಿಕೊಂಡಿದ್ದ ಮೈಸೂರು ಮೂಲದ ಎನ್. ಕೆ. ರಾಜೇಶ್ ನಾಯ್ಡು ಕಥೆ,ಚಿತ್ರಕಥೆ,ಸಂಭಾಷಣೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಸದಾ ಹೊಸಬ ಪ್ರೋತ್ಸಾಹ ಕೊಡುತ್ತಿರುವ ನಟ ಶರಣ್ ಈ ಸಿನಿಮಾಕ್ಕೂ ಎಣ್ಣೆ ಹಾಡು ಕುರಿತಾದ 'ಬೇಡ ಮಚ್ಚಾ ಬೇಡ' ಸಾಲಿನ ಗೀತೆಗೆ ಧ್ವನಿಯಾಗಿ ಶುಭ ಹಾರೈಸಿರುವುದು ತಂಡಕ್ಕೆ ಶಕ್ತಿ ಬಂದಿದೆ. ಸಿನಿಮಾವು ಫ್ಯಾಮಿಲಿ ಕಥೆಯನ್ನು ಹೊಂದಿದ್ದು, ಮಿಕ್ಕಂತೆ ವಿಷಯಗಳನ್ನು ಮುಂದಿನ ದಿನಗಳಲ್ಲಿ ನೀಡುವುದಾಗಿ ನಿರ್ದೇಶಕರು ಹೇಳಿಕೊಂಡಿದ್ದಾರೆ. ಬೆಂಗಳೂರಿನ ಮಹೇಂದ್ರ ನಾಯಕ. ಸುಶ್ಮಿತ ನಾಯಕ್ ಹಾಗೂ ವಿಂಯಾನ್‌ಶಿ ಗ್ಡೆ ನಾಯಕಿಯರು. ಉಳಿದಂತೆ ಗೌರವ್ ಶೆಟ್ಟಿ, ಶೋಭರಾಜ್, ರವಿಶಂಕರ್ ಗೌಡ, ಸುನಿಲ್ ಪುರಾಣಿಕ್, ತುಕಾಲಿಸಂತು, ಮೈತ್ರಿ ಜಗ್ಗಿ ಮುಂತಾದವರು ಅಭಿನಯಿಸಿದ್ದಾರೆ.



## ದುನಿಯಾ ವಿಜಯ್ - ರಚಿತರಾಮ್ ಅಭಿನಯದ 'ಲ್ಯಾಂಡ್ ಲಾರ್ಡ್' ನಿಂಗವ್ವ ನಿಂಗವ್ವ ಹಾಡು ಬಿಡುಗಡೆ

ಸಾರಥಿ ಫಿಲಂಸ್ ಲಾಂಛನದಲ್ಲಿ ಕೆ.ವಿ. ಸತ್ಯ ಪ್ರಕಾಶ್-ಹೇಮಂತ್ ಗೌಡ ಕೆ.ಎಸ್ ನಿರ್ಮಿಸಿರುವ, ಜಡೇಶ್ ಕೆ.ಹಂಪಿ ನಿರ್ದೇಶನದ ಹಾಗೂ ದುನಿಯಾ ವಿಜಯ್, ರಚಿತರಾಮ್ ಅಭಿನಯದ 'ಲ್ಯಾಂಡ್ ಲಾರ್ಡ್' ಚಿತ್ರಕ್ಕಾಗಿ ಯೋಗರಾಜ್ ಭಟ್ ಅವರು ಬರೆದಿರುವ, ಅಜನೀಶ್ ಲೋಕನಾಥ್ ಸಂಗೀತ ನೀಡಿರುವ "ನಿಂಗವ್ವ ನಿಂಗವ್ವ" ಹಾಡು ಬಿಡುಗಡೆಯಾಗಿದೆ. ವಿಜಯ್ ಪ್ರಕಾಶ್-ಅನನ್ಯ ಭಟ್ ಕಂಠಸಿರಿಯಲ್ಲಿ ಮೂಡಿಬಂದಿರುವ ಈ ಹಾಡಿಗೆ ಭೂಷಣ್ ನೃತ್ಯ ಸಂಯೋಜನೆ ಮಾಡಿದ್ದಾರೆ. ದುನಿಯಾ ವಿಜಯ್-ರಚಿತರಾಮ್ ಅಭಿನಯಕ್ಕೆ ಅಭಿಮಾನಿಗಳು ಫಿದಾ ಆಗಿದ್ದಾರೆ. ಆನಂದ್ ಆಡಿಯೋ ಯೂಟ್ಯೂಬ್ ಚಾನಲ್‌ನಲ್ಲಿಬಿಡುಗಡೆಯಾಗಿರುವ ಈ ಹಾಡಿಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಸ್ಯಾಂಡಲ್‌ವುಡ್‌ನ ತಾರಾ ದಂಪತಿಗಳಾದ "ನೆನಪಿರಲಿ" ಪ್ರೇಮ್-ಜ್ಯೋತಿ, ಡಾರ್ಲಿಂಗ್ ಕೃಷ್ಣ-ಮಿಲನ ನಾಗರಾಜ್ ಹಾಗೂ ತರುಣ್ ಸುಧೀರ್-ಸೋನಾಲ್ ಅವರಿಂದ "ನಿಂಗವ್ವ ನಿಂಗವ್ವ" ಹಾಡು ಬಿಡುಗಡೆಯಾಯಿತು.



## 'ರಕ್ಕಿ'ಯ ಫಸ್ಟ್ ಡ್ರಾಪ್ ಸ್ಟೈಲಿಷ್ ಆಗಿ ಬಿಡುಗಡೆ

ಬಹು ನಿರೀಕ್ಷಿತ ಕನ್ನಡ ಸಿನಿಮಾ "ರಕ್ಕಿ"ಯ ಫಸ್ಟ್ ಡ್ರಾಪ್ ಅಧಿಕೃತವಾಗಿ ಬಿಡುಗಡೆಗೊಂಡಿದ್ದು, ಎಲ್ಲಾ ಪ್ಲಾಟ್‌ಫಾರ್ಮ್‌ಗಳಲ್ಲಿ ಸ್ಟೈಲಿಷ್ ಬಜ್ ಸೃಷ್ಟಿಸಿದೆ. ಅಶ್ವಿನಿ ಪುನೀತ್ ರಾಜ್‌ಕುಮಾರ್ ಆಶೀರ್ವಾದದೊಂದಿಗೆ ರೂಪುಗೊಂಡಿರುವ ರಕ್ಕಿ ಚಿತ್ರವನ್ನು SNR ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ಸುರೇಶ್ ಸಾಲಿಗ್ರಾಮ ನಿರ್ಮಾಣ ಮಾಡಿದ್ದು, ವೆಂಕಟ್ ಭಾರದ್ವಾಜ್ ನಿರ್ದೇಶನ ಮಾಡಿದ್ದಾರೆ. ಚಿತ್ರತಂಡ ಇತ್ತೀಚೆಗೆ ಬಿಡುಗಡೆ ಮಾಡಿದ "ರಗಡೋ ರಕ್ಕಿ" ಎಂಬ ಹೈ- ಎನರ್ಜಿ ಹುಕ್ ಸಿಗ್ನೇಚರ್ ಸ್ಟೆಪ್ ತನ್ನ ಹೊಸತನ ಮತ್ತು ಮಾಸ್ ಅಪೀಲ್‌ನಿಂದ ಗಮನ ಸೆಳೆದಿದೆ. ನೃತ್ಯ ನಿರ್ದೇಶಕ ಕಂಬಿ ರಾಜು ಅವರ ಕೊರಿಯೋಗ್ರಫಿಯಲ್ಲಿ ಮೂಡಿಬಂದ ಈ ವಿಶಿಷ್ಟ ಸ್ಟೆಪ್ ಅನ್ನು ಹೀರೋ ರಕ್ಕಿ ಸುರೇಶ್ ಉತ್ತಮವಾಗಿ ಪ್ರದರ್ಶಿಸಿದ್ದು, ಹೊಸ ನಾಯಕನ ಆತ್ಮವಿಶ್ವಾಸಭರಿತ ಪರಿಚಯಕ್ಕೆ ಸಾಕ್ಷಿಯಾಗಿದೆ. ಚಿತ್ರದ ಎಲ್ಲಾ ಟಾಕಿ ಭಾಗಗಳ ಚಿತ್ರೀಕರಣ ಪೂರ್ಣಗೊಂಡಿದ್ದು, ಪ್ರಸ್ತುತ ಡಬ್ಬಿಂಗ್ ಹಂತಕ್ಕೆ ಚಿತ್ರ ಪ್ರವೇಶಿಸಿದೆ. ಶೀಘ್ರದಲ್ಲೇ ಬೆಂಗಳೂರು ಹೊರಗೆ ತೆರಳಿ, ಚಿತ್ರದ ಎರಡು ಪ್ರಮುಖ ಹಾಡುಗಳ ಚಿತ್ರೀಕರಣ ನಡೆಸಲು ತಂಡ ಸಜ್ಜಾಗಿದೆ.



## ವಿಜಯ್ ದೇವರಕೊಂಡ ನಾಯಕನಾಗಿ ನಟಿಸಲಿರುವ 'ರೌಡಿ ಜನಾರ್ದನ' ಟೈಟಲ್ ಗ್ಲಿಂಪ್ಸ್ ಬಿಡುಗಡೆ

ಸದಾ ವಿಭಿನ್ನ ಪಾತ್ರಗಳ ಮೂಲಕ ಪ್ರೇಕ್ಷಕರನ್ನು ರಂಜಿಸುವ ಸೌತ್ ಸ್ಟಾರ್ ವಿಜಯ್ ದೇವರಕೊಂಡ ಅಭಿನಯದ, ಶ್ರೀ ವೆಂಕಟೇಶ್ವರ ಕ್ರಿಯೇಷನ್ಸ್ ಬ್ಯಾನರ್‌ನ ಬಹುನಿರೀಕ್ಷಿತ ಚಿತ್ರದ ಶೀರ್ಷಿಕೆ ಅನಾವರಣಗೊಂಡಿದೆ. ಖ್ಯಾತ ನಿರ್ಮಾಪಕರಾದ ದಿಲ್ ರಾಜು ಮತ್ತು ಶಿರೀಶ್ ನಿರ್ಮಾಣದ ಈ ಚಿತ್ರಕ್ಕೆ 'ರೌಡಿ ಜನಾರ್ದನ' ಎಂದು ನಾಮಕರಣ ಮಾಡಲಾಗಿದ್ದು, ಸೋಮವಾರ ಹೈದರಾಬಾದ್‌ನಲ್ಲಿ ನಡೆದ ಭವ್ಯ ಸಮಾರಂಭದಲ್ಲಿ ಚಿತ್ರದ ಶೀರ್ಷಿಕೆಯ 'ಗ್ಲಿಂಪ್ಸ್' ಬಿಡುಗಡೆ ಮಾಡಲಾಯಿತು. 'ರಾಜಾ ವಾರು ರಾಣಿ ಗಾರು' ಚಿತ್ರದ ಮೂಲಕ ಹೆಸರು ಮಾಡಿದ್ದ ಪ್ರತಿಭಾವಂತ ನಿರ್ದೇಶಕ ರವಿ ಕಿರಣ್ ಕೋಲಾ ಈ ಚಿತ್ರವನ್ನು ನಿರ್ದೇಶಿಸುತ್ತಿದ್ದಾರೆ. ರಕ್ತಸಿಕ್ತ ಹಾಗೂ ರಾ ಆಕ್ಷನ್ ಕಥಾಹಂದರ ಹೊಂದಿರುವ ಈ ಗ್ಲಿಂಪ್ಸ್, ಪ್ರೇಕ್ಷಕರಲ್ಲಿ ಚಿತ್ರದ ಬಗ್ಗೆ ಕುತೂಹಲವನ್ನು ಹೆಚ್ಚಿಸಿದೆ. ವಿಜಯ್ ದೇವರಕೊಂಡ ಅವರು ಈ ಹಿಂದೆಂದೂ ಕಾಣದ ಮಾಸ್ ಅವತಾರದಲ್ಲಿ ಕಾಣಿಸಿಕೊಂಡಿದ್ದು, ಅವರ ವಿಭಿನ್ನ ಸ್ಲಾಂಗ್ ಮತ್ತು ಮ್ಯಾನರಿಸಂ ಅಭಿಮಾನಿಗಳಿಗೆ ಹೊಸ ಅನುಭವ ನೀಡಲಿದೆ.



## 'ನಾನ್ಯಾರು' ಅಂತಿದ್ದಾರೆ 'ಸ್ವಾರ್ಥ ರತ್ನ' ಆದರ್ಶ ಗುಂಡುರಾಜ್

ಈ ಹಿಂದೆ "ಸ್ವಾರ್ಥ ರತ್ನ" ಸೇರಿದಂತೆ ಎರಡು ಚಿತ್ರಗಳಲ್ಲಿ ನಟಿಸಿದ್ದ ಆದರ್ಶ ಗುಂಡುರಾಜ್ ಸದ್ಯ "ಕ್ಯಾಲೆಂಡರ್" ಚಿತ್ರದ ನಾಯಕನಾಗಿ ನಟಿಸಿದ್ದಾರೆ. ಈ ಚಿತ್ರದ "ನಾನ್ಯಾರು" ಎಂಬ ಹಾಡು ಇತ್ತೀಚೆಗೆ ಆನಂದ್ ಆಡಿಯೋ ಯೂಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆಯಾಗಿದೆ. ಹಾಡಿಗೆ ಮೆಚ್ಚುಗೆ ವ್ಯಕ್ತವಾಗಿ ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಇತ್ತೀಚೆಗೆ ಹಾಡು ಬಿಡುಗಡೆ ಸಮಾರಂಭ ಅದ್ದೂರಿಯಾಗಿ ನೆರವೇರಿತು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. "ಸ್ವಾರ್ಥ ರತ್ನ" ನಂತರ ಈ ಚಿತ್ರದ ನಾಯಕನಾಗಿ ಅಭಿನಯಿಸಿದ್ದಾನೆ. ಇದು ನಾನು ನಾಯಕನಾಗಿ ನಟಿಸಿರುವ ಮೂರನೇ ಚಿತ್ರ. ವರ್ಷಗಳು ಕಳೆಯುತ್ತಿರುತ್ತದೆ. ಆದರೆ ದಿನವನ್ನು ಗುರುತಿಸಲು ನಮಗೆ "ಕ್ಯಾಲೆಂಡರ್" ಬಹಳ ಸಹಾಯಕಾರಿ. ಶೀರ್ಷಿಕೆಗೂ ಹಾಗೂ ಚಿತ್ರಕ್ಕೂ ಸಂಬಂಧವಿದೆ. ನಾನೇ ಚಿತ್ರಕ್ಕೆ ಕಥೆ ಬರೆದು ನಿರ್ಮಾಣ ಮಾಡಿದ್ದೇನೆ. ಈಗಾಗಲೇ ಚಿತ್ರಕ್ಕೆ ಚಿತ್ರೀಕರಣ ಮುಕ್ತಾಯವಾಗಿದ್ದು, ಪೋಸ್ಟ್ ಪ್ರೊಡಕ್ಷನ್‌ನಲ್ಲಿ ಬ್ಯುಸಿಯಾಗಿದೆ.



## ಡಿ.25ಕ್ಕೆ ರುದ್ರಾವತಾರ ತಾಳಿದ ಕಿಚ್ಚನ ಮಾರ್ಕ್

ಕಿಚ್ಚ ಸುದೀಪ್ ನಟನೆಯ ಮಾರ್ಕ್ ಸಿನಿಮಾ ಈಗಾಗಲೇ ದೊಡ್ಡ ಹೈಪ್ ಕ್ರಿಯೇಟ್ ಮಾಡಿದೆ. ಇದೀಗ ಚಿತ್ರದ ಕಾಳಿ ಸಾಂಗ್ ಬಿಡುಗಡೆಯಾಗಿದೆ. ಅನಿರುದ್ಧ ಶಾಸ್ತ್ರಿ ಸಾಹಿತ್ಯ ಬರೆದು ಹಾಡಿಗೆ ಧ್ವನಿಯಾಗಿದ್ದಾರೆ. ಅಜನೀಶ್ ಲೋಕನಾಥ್ ಸಂಗೀತ ನಿರ್ದೇಶನ ಈ ಗೀತೆಗಿದೆ. ಕಿಚ್ಚ ಕಾಳಿ ಹಾಡಿನಲ್ಲಿ ರುದ್ರಾವತಾರ ತಾಳಿದ್ದಾರೆ. ಕೈಯಲ್ಲಿ ತ್ರಿಶೂಲ ಹಿಡಿದು ದುಷ್ಟರ ಸಂಹಾರ ಮಾಡಲು ಹೊಸ ಅವತಾರದಲ್ಲಿ ಸುದೀಪ್ ಕಾಣಿಸಿಕೊಂಡಿದ್ದಾರೆ. ಮಾರ್ಕ್ ಸಿನಿಮಾ ಡಿ.25ಕ್ಕೆ ಬಿಡುಗಡೆಯಾಗಲಿದೆ. ಈ ಚಿತ್ರವನ್ನು ನಿರ್ದೇಶನ ಮಾಡಿರುವುದು ವಿಜಯ್ ಕಾರ್ತಿಕೇಯ. ಸುದೀಪ್ ಜೊತೆಗೆ ಶೈನ್ ಟಾಮ್ ಚಾಕೊ, ಯೋಗಿ ಬಾಬು ಇನ್ನೂ ಕೆಲವು ಪ್ರತಿಭಾವಂತ ನಟರು ನಟಿಸಿದ್ದಾರೆ. ಸಿನಿಮಾಕ್ಕೆ ಕಿಚ್ಚ ಕ್ರಿಯೇಷನ್ ಮತ್ತು ಸತ್ಯ ಜ್ಯೋತಿ ಫಿಲಮ್ಸ್ ಬಂಡವಾಳ ಹೂಡಿದೆ. ಸಿನಿಮಾಕ್ಕೆ ಅಜನೀಶ್ ಲೋಕನಾಥ್ ಸಂಗೀತ ನಿರ್ದೇಶನ ಮಾಡಿದ್ದಾರೆ.



## ಸುಪ್ತ ಮನಸ್ಸಿಗೆ ದರ್ಪಣ ಹಿಡಿಯುವ 'ವಿಕಲ್ಪ'

ಕನ್ನಡ ಚಿತ್ರರಂಗದಲ್ಲಿ ಕೆಲವು ಸಿನಿಮಾಗಳು ತಮ್ಮ ಸ್ಟಾರ್ ಕಾಸ್ಟಿಂಗ್, ಬಿಗ್ ಬಜೆಟ್ ಮೂಲಕ ಸದ್ದು ಮಾಡಿದರೆ, ಇನ್ನು ಕೆಲವು ಸಿನಿಮಾಗಳು ತಮ್ಮ ಕಂಟೆಂಟ್, ಟೈಟಲ್ ಮೂಲಕವೇ ಸಿನಿಪ್ರಿಯರನ್ನು ಸದ್ದಿಲ್ಲದೆ ಸೆಳೆಯಲು ಯಶಸ್ವಿಯಾಗಿಬಿಡುತ್ತವೆ. ಇತ್ತೀಚೆಗೆ ಹೀಗೆ ಅಂಥದ್ದೇ ಕಂಟೆಂಟ್ ಮತ್ತು ಟೈಟಲ್ ಮೂಲಕವೇ ಸ್ಯಾಂಡಲ್‌ವುಡ್ ಸಿನಿ ಪ್ರಿಯರನ್ನು ಸೆಳೆಯುತ್ತಿರುವ ಚಿತ್ರ 'ವಿಕಲ್ಪ' ಬಹುತೇಕ ಹೊಸ ಪ್ರತಿಭೆಗಳೇ ಸೇರಿ ನಿರ್ಮಿಸುತ್ತಿರುವ 'ವಿಕಲ್ಪ' ಒಂದು ಸೈಕಾಲಜಿಕಲ್-ಥ್ರಿಲ್ಲರ್ ಕಥಾಹಂದರದ ಚಿತ್ರ. ಮನುಷ್ಯನ ಮನಸ್ಸಿನ ಸುಪ್ತ ಭಾವನೆಗಳು, ತುಮುಲ-ತಲ್ಲಣಗಳನ್ನು ಈ ಚಿತ್ರದ ಮೂಲಕ ತೆರೆಮೇಲೆ ತರುತ್ತಿದ್ದಾರೆ ಯುವನಟ ಕಂ ನಿರ್ದೇಶಕ ಪೃಥ್ವಿರಾಜ್ ಪಾಟೀಲ್. ಕನ್ನಡ ಚಿತ್ರರಂಗದಲ್ಲಿ ಪ್ರತಿವರ್ಷ ನೂರಾರು ಸಿನಿಮಾಗಳು ಬಿಡುಗಡೆಯಾಗಿ ತೆರೆಗೆ ಬರುತ್ತಿವೆ. ಆದರೆ ಇಷ್ಟೊಂದು ಸಿನಿಮಾಗಳ ಪೈಕಿ ಸೈಕಾಲಜಿಕಲ್ ಥ್ರಿಲ್ಲರ್ ಸಿನಿಮಾಗಳ ಸಂಖ್ಯೆ ಮಾತ್ರ ಕೇವಲ ಬೆರಳೆಣಿಕೆಯಷ್ಟು ಮಾತ್ರ ಎಂದೇ ಹೇಳಬಹುದು. ಅಂಥ ಬೆರಳೆಣಿಕೆಯ ವಿರಳ ಸಿನಿಮಾಗಳ ಸಾಲಿಗೆ ಸೇರುವ ಚಿತ್ರವೇ 'ವಿಕಲ್ಪ'. ಬಹುತೇಕ ಯುವ ಮನಸ್ಸುಗಳೇ ಸೇರಿ ಮಾಡಲು ಹೊರಟಿರುವ 'ವಿಕಲ್ಪ' ಕನ್ನಡ ಚಿತ್ರರಂಗದ ಮಟ್ಟಿಗೆ ಒಂದು ಅಪರೂಪದ ಚಿತ್ರವಾಗಿ ನಿಲ್ಲದೆ ಎಂಬುದು ಚಿತ್ರತಂಡದ ನಿರೀಕ್ಷೆ.




















KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021